ಸಂಪುಟ 01 | ಸಂಚಿಕೆ 79 | ಶನಿವಾರ 31 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707586, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರರಾಷ್ಟ್ರೀಯ ಜೀಬ್ರಾ ದಿನ

ಪ್ರತಿ ಜನವರಿ 31 ರಂದು, ಪ್ರಪಂಚದಾದ್ಯಂತ ಜನರು ಅಂತರರಾಷ್ಟ್ರೀಯ ಜೀಬ್ರಾ ದಿನವನ್ನು ಆಚರಿಸುತ್ತಾರೆ. ಈ ಪ್ರಾಣಿಯ ಸಂರಕ್ಷಣೆಯನ್ನು ನೀವು ಹೇಗೆ ಬೆಂಬಲಿಸಬಹುದು ಎಂಬುದರ ಕುರಿತು ಜ್ಞಾನವನ್ನು ಹರಡುವುದು ಈ ದಿನದ ಉದ್ದೇಶವಾಗಿದೆ.ಆದ್ದರಿಂದ, ಇವು ಜನವರಿ 2024 ರ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಮುಖ ದಿನಗಳಾಗಿವೆ, ಇದು ಹಲವಾರು ಪರೀಕ್ಷೆಗಳಿಗೆ ತಯಾರಿ ಮಾಡಲು ಮತ್ತು ನಿಮ್ಮ ಜ್ಞಾನವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

## ಸುಭಾಷಿತ

ಎಲ್ಲರಿಗೂ ನಾವು ಅರ್ಥವಾಗಲು ಸಾಧ್ಯವಿಲ್ಲ; ತಕ್ಕಡಿ ಕೇವಲ ತೂಕವನ್ನಷ್ಟೇ ತೂಗುತ್ತದೆ, ಗುಣಮಟ್ಟವನ್ನಲ್ಲ!

ಎಪಿಜೆ ಅಬ್ದುಲ್ ಕಲಾಂ

# ಕಾಂಗ್ರೆಸ್ ಸರ್ಕಾರದಲ್ಲಿ ಅಭಿವೃದ್ಧಿ ಶೂನ್ಯ :ಬಿ.ವೈ.ವಿಜಯೇಂದ್ರ

**ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಅಭಿವೃದ್ಧಿ ಶೂನ್ಯವಾಗಿದ್ದು, ಜನರ ವಿಶ್ವಾಸ ಕಳೆದುಕೊಂಡಿದೆ. ಎಲ್ಲಾ ರಂಗದಲ್ಲೂ ವಿಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ವಿಧಾನಸಭೆಯಲ್ಲಿಂದು ಆರೋಪಿಸಿದರು.**

ಜಂಟಿ ಅಧಿವೇಶನವನ್ನುದ್ದೇಶಿಸಿ ರಾಜ್ಯಪಾಲರು ಮಾಡಿದ್ದ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯಪಾಲರ ಮೂಲಕ ಈ ಸರ್ಕಾರ ಸತ್ಯ ಹೇಳಿಸಬೇಕಿತ್ತು. ಆದರೆ ಅದನ್ನು ಮಾಡಿಲ್ಲ. ವಾಲೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಹಗರಣ, ಅಕ್ರಮ ಬಾಂಗ್ಲಾ ವಲಸಿಗರಿಗೆ ರಕ್ಷಣೆ, ನೀಟ್ ತಡೆ ಹಿಡಿದಿರುವುದು ಸೇರಿದಂತೆ ಎಲ್ಲಾ ವಿಚಾರ ಹೇಳಬೇಕಿತ್ತು. ಎಲ್ಲವುದರ ಮೇಲೆ ತೆರಿಗೆ ಹಾಕಿ ಬೆಲೆ ಏರಿಕೆಗೆ ಕಾರಣವಾಗಿದೆ ಎಂದು ಟೀಕಿಸಿದರು. ಸಾಮಾಜಿಕ ಮಾಧ್ಯಮ ನಿರ್ವಹಣೆ ಸೇವೆ ಕಳೆದ ಎರಡೂವರೆ ವರ್ಷದಲ್ಲಿ 3.7 ಲಕ್ಷ ಕೋಟಿ ರೂ. ಸಾಲ ಮಾಡಿದೆ.

ಇದು ಮುಂಬರುವ ಸರ್ಕಾರಗಳ ಮೇಲೆ ಸಾಲ ತೀರಿಸಬೇಕಾದ ಹೊರೆಯಾಗಲಿದೆ ಎಂದರು. ದ್ವೇಷಭಾಷಣ ಕಾಯ್ದೆ ಜಾರಿಗೆ ಬರುವ ಮುನ್ನವೇ ಆ ಕಾಯ್ದೆಯಡಿ ಪೊಲೀಸರು ಕ್ರಮಕ್ಕೆ ಮುಂದಾಗಿದ್ದಾರೆ ಎಂದು ಆರೋಪಿಸಿದರು.



ಅಕ್ರಮ ಬಾಂಗ್ಲಾ ವಲಸಿಗರನ್ನು ಪತ್ತೆ ಹಚ್ಚಿ ಹಿಡಿದುಕೊಟ್ಟಂತಹ ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಅವರನ್ನು ಬಂಧಿಸಿರುವುದು ಅಕ್ಷಮ್ಯ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.ಯಲ್ಲಾಪುರದಲ್ಲಿ ದಲಿತ ಮಹಿಳೆಯನ್ನು ಹಾಡುಹಗಲೇ ಕೊಲೆ ಮಾಡಲಾಗಿದೆ. ಮಂಗಳೂರು ಮತ್ತು ಬಳ್ಳಾರಿಯಲ್ಲಿ ಕೊಟ್ಟಂತೆ 50 ಲಕ್ಷ ರೂ. ಪರಿಹಾರ ಕೊಡಬೇಕು. ಬಳ್ಳಾರಿ ಘರ್ಷಣೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು. ಗ್ಯಾರಂಟಿ ಯೋಜನೆಗೆ ಹಣ ಒದಗಿಸಲು ಅಬಕಾರಿ ಇಲಾಖೆಗೆ ವಾರ್ಷಿಕ 40 ಸಾವಿರ ಕೋಟಿ ರೂ. ಸಂಗ್ರಹದ ಗುರಿ ನೀಡಲಾಗಿದೆ.

ಇದರಿಂದ ದಿನಸಿ ಅಂಗಡಿಯಲ್ಲೂ ಮದ್ಯ ಮಾರಾಟ ಮಾಡುವ ದುಸ್ಥಿತಿ ಬಂದೊದಗಿದೆ. ಕುಡುಕರ ರಾಜ್ಯ ಮಾಡಲು ಸರ್ಕಾರ ಹೊರಟಿದೆ. ಇದರಿಂದ ಮಹಿಳೆಯರ ಬಾಳಲ್ಲಿ ಬೆಳಕು ಹೇಗಾಗುತ್ತದೆ. ಗೃಹಲಕ್ಷ್ಮಿ ಯೋಜನೆಯಡಿ 2 ಸಾವಿರ ರೂ. ಕೊಟ್ಟು 5 ಸಾವಿರ ರೂ. ಕಿತ್ತುಕೊಳ್ಳುತ್ತಿದೆ ಎಂದು ಟೀಕಿಸಿದರು. ತುಂಗಭದ್ರಾ ಜಲಾಶಯದ 33 ಕ್ರಸ್ಟ್‌ಗೇಟ್‌ಗಳನ್ನು ಬದಲಾಯಿಸಬೇಕು. ಆಂಧ್ರ ಸರ್ಕಾರ ಒಟ್ಟು 50 ಕೋಟಿ ರೂ. ಕೊಟ್ಟಿದ್ದು, ಅದರಲ್ಲಿ ರಾಜ್ಯಸರ್ಕಾರ ನೀಡಿದ್ದ 10 ಕೋಟಿ ರೂ.ಗಳನ್ನು ವಾಪಸ್ ಪಡೆಯಲಾಗಿದೆ ಎಂದು ಆರೋಪಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಹಿಂದಾ ನಾಯಕರೆಂದು ಬಿಂಬಿಸಿಕೊಂಡಿದ್ದಾರೆ. ಆದರೆ ಈ ಸರ್ಕಾರದಿಂದ ಅವರ ಕನಸುಗಳು ನುಚ್ಚು ನೂರಾಗಿವೆ. ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಗೆ ಹಣ ಶೇ.50 ರಷ್ಟು ಕಡಿತವಾಗಿವೆ.

ಮುಂದಿನ ದಿನಗಳಲ್ಲಾದರೂ ನ್ಯಾಯ ಒದಗಿಸಬೇಕು ಎಂದರು. ಮಂಡ್ಯ ಜಿಲ್ಲೆಯಲ್ಲಿ ಕಳೆದ 6 ತಿಂಗಳಿನಿಂದ ಸ್ವಾತಂತ್ರ್ಯ ಯೋಧರಿಗೆ 4.8 ಕೋಟಿ ರೂ. ಗೌರವಧನ ನೀಡದೇ ಅಪಮಾನ ಮಾಡುತ್ತಿದೆ ಎಂದು ಆಪಾದಿಸಿದರು. ಕಾಂಗ್ರೆಸ್ ಸರ್ಕಾರ ಅಹಿಂದ ವರ್ಗದವರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದೆಯೇ ಹೊರತು ನ್ಯಾಯ ಒದಗಿಸುತ್ತಿಲ್ಲ ಎಂದು ಕೆಲವು ಅಂಕಿ ಅಂಶಗಳ ಸಹಿತ ಆರೋಪ ಮಾಡಿದರು. ದೇಶದಲ್ಲಿ ಕಾಂಗ್ರೆಸ್ ಪಕ್ಷ ಹೀನಾಯ ಸ್ಥಿತಿಗೆ ತಲುಪಿದೆ. ಯುಪಿಎ ಸರ್ಕಾರವಿದ್ದಾಗ ಟುಜಿ ಹಗರಣ, ಕಲ್ಲಿದ್ದಲು ಹಗರಣ, ಕಾಮನ್‌ವೆಲ್ತ್ ಗೇಮ್ ಹಗರಣ ಸೇರಿದಂತೆ ಭ್ರಷ್ಟಾಚಾರದ ಚರ್ಚೆಯಾಗುತ್ತಿತ್ತು. ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಭಿವೃದ್ಧಿಯ ಚರ್ಚೆಯಾಗುತ್ತಿದೆ. 2014 ರಿಂದ 2025 ರ ನಡುವೆ ಎನ್‌ಡಿಎ ಸರ್ಕಾರದ ಮೇಲೆ ಯಾವುದಾದರೂ ಭ್ರಷ್ಟಾಚಾರ ಆರೋಪ ಮಾಡಲು ಸಾಧ್ಯವಾಗಿದೆಯೇ ಈ ಬಗ್ಗೆ ಸವಾಲು ಹಾಕುತ್ತೇನೆ ಎಂದರು.

## ಹಾಲಾಪೂರ: ಗ್ರಾಪಂಗೆ ಆಡಳಿತ ಅಧಿಕಾರಿಯಾಗಿ ಸ.ನಿ,ತೋಟಗಾರಿಕೆ ಇಲಾಖೆ ಮಾನ್ವಿ ನೇಮಕ


ನೈಜ್ಯ ದೇಸೆ ನ್ಯೂಸ್

**ಹಾಲಾಪೂರ: ಪ್ರಸ್ತುತ ರಾಯಚೂರು ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳ ಸದಸ್ಯರ ಅವಧಿ ಬರುವ ಫೆಬ್ರವರಿ ಎರಡಕ್ಕೆ ಮುಕ್ತಾಯಗೊಳ್ಳುತ್ತಿದ್ದು, ಕರ್ನಾಟಕ ಗ್ರಾಮ ಸ್ವರಾಜ್ಯ ಮತ್ತು ಪಂಚಾಯತ್ ರಾಜ್ ಅಧಿನಿಯಮ1993 ಪ್ರಕರಣ ಅನ್ವಯ ಆಡಳಿತ ಅಧಿಕಾರಿಗಳನ್ನು ಮುಂದಿನ ಚುನಾವಣೆವರೆಗೆ ಜಿಲ್ಲಾಧಿಕಾರಿಗಳು, ತಾಲೂಕುವಾರು ಅಧಿಕಾರಿಗಳನ್ನು ನೇಮಿಸಿ ಆದೇಶಿಸಿದ್ದಾರೆ.**




ಅದರಂತೆ ಮಸ್ಕಿ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ತಾಲೂಕುವಾರು ಅಧಿಕಾರಿಗಳು ಗ್ರಾಮ ಪಂಚಾಯತಿಗೆ ನೇಮಕವಾಗಿದ್ದು, ಹಾಲಾಪೂರ ಗ್ರಾಮ ಪಂಚಾಯಿತಿಗೆ ಆಡಳಿತ ಅಧಿಕಾರಿಯಾಗಿ ಸಹಾಯಕ ನಿರ್ದೇಶಕರು ತೋಟಗಾರಿಕೆ ಇಲಾಖೆ ಮಾನ್ವಿ ಇವರು ನೇಮಕವಾಗಿದ್ದು, ಸದರಿ ಆಡಳಿತ ಅಧಿಕಾರಿ ಪ್ರಭಾರ ವಹಿಸಿಕೊಂಡು ಸರ್ಕಾರ ನೀಡಿರುವ ನಿರ್ದೇಶನವನ್ನ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಯವರ ಆದೇಶವಾಗಿದೆ.

# ಬಳಗಾನೂರಲ್ಲಿ ಕೋತಿ ನಾಯಿಗಳ ಆರ್ಭಟ ಭಯ ಭೀತರಾದ ಮಕ್ಕಳು, ಮಹಿಳೆಯರು



ನೈಜ್ಯ ದೇಸೆ ನ್ಯೂಸ್

**ಬಳಗಾನೂರು ಪಟ್ಟಣದ ಜನಜೀವನಕ್ಕೆ ಇದೀಗ ಹೊಸ ಭೀತಿಯೊಂದು ಎದುರಾಗಿದೆ. ಪಟ್ಟಣದಲ್ಲಿ ಬೃಹದಾಕಾರದ ಕೋತಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ಹೊರಬರಲು ಭಯಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.**

ಶುಕ್ರವಾರ ಸಂಜೆ ಐದನೇ ವಾರ್ಡಿನ ಮನೆಯೊಂದಕ್ಕೆ ಕೋತಿಗಳ ಗುಂಪೊಂದು ಮುತ್ತಿಗೆ ಹಾಕಿದ ಘಟನೆ ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಮನೆಯೊಳಗಿದ್ದ ಮಕ್ಕಳು ಭಯದಿಂದ ಅಳಲಾರಂಭಿಸಿದ್ದು, ಕುಟುಂಬಸ್ಥರು ಕೋತಿಗಳ ದಾಳಿ ಭೀತಿಯಲ್ಲಿ ಸಿಲುಕಿದ್ದರು. ಇನ್ನೊಂದೆಡೆ, ಆರನೇ ವಾರ್ಡಿನಲ್ಲಿ ಕೋತಿಯೊಂದು ಎತ್ತುಗಳಿಗೆ ಬೆನ್ನುಹತ್ತಿ ಕಡಿಯಲು ಹೋಗಿದ್ದ ಘಟನೆ ನಡೆದಿದೆ. ಅದನ್ನು ಓಡಿಸಲು ಹೋದ ಎತ್ತುಗಳ ಮಾಲೀಕರ ಮೇಲೆಯೇ ಕೋತಿ ಹಾರಿ ಕಚ್ಚಲು ಮುಂದಾದ್ದರಿಂದ, ಆತ ಭಯಭೀತನಾಗಿ ಹೆಗಲಿಗೆ ಬಾರುಕೋಲು ಹಾಕಿಕೊಂಡೇ ಪಟ್ಟಣ ಪಂಚಾಯ್ತಿಗೆ ತೆರಳಿ ಮುಖ್ಯಾಧಿಕಾರಿಗಳಿಗೆ ದೂರು ನೀಡಿದ್ದಾನೆ.

ಸ್ಥಳೀಯರ ಹೇಳಿಕೆಯಂತೆ, ಕೋತಿಗಳನ್ನು ಓಡಿಸಲು ಹೋದರೆ ನೇರವಾಗಿ ಮೈಮೇಲೆ ಹಾರಿಬಿಡುತ್ತಿದ್ದು, ಯಾವುದೇ ಕ್ಷಣದಲ್ಲಿ ಅನಾಹುತ ಸಂಭವಿಸುವ ಭೀತಿ ಕಾಡುತ್ತಿದೆ. ಒಂದು ಕಡೆ ಬೀದಿ ನಾಯಿಗಳ ಕಾಟ, ಮತ್ತೊಂದು ಕಡೆ ಕೋತಿಗಳ ಆರ್ಭಟ ಎರಡು ಸಮಸ್ಯೆಗಳ ಮಧ್ಯೆ ಸಿಕ್ಕು ಬಳಗಾನೂರಿನ ನಾಗರೀಕರು ನಲುಗಿಹೋಗಿದ್ದಾರೆ. ಈ ಹಿನ್ನೆಲೆಯಲ್ಲಿ, ಪಟ್ಟಣ ಪಂಚಾಯ್ತಿಯ ಮುಖ್ಯಾಧಿಕಾರಿಗಳು ಕೂಡಲೇ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಅರಣ್ಯ ಇಲಾಖೆಗೆ ಮಾಹಿತಿ ನೀಡಿ ಕೋತಿಗಳನ್ನು ಹಿಡಿದು ಅರಣ್ಯ ಪ್ರದೇಶಕ್ಕೆ ಸುರಕ್ಷಿತವಾಗಿ ಬಿಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಅನಾಹುತಗಳಾಗುವ ಮುನ್ನವೇ ಅಧಿಕಾರಿಗಳು ಎಚ್ಚೆತ್ತುಕೊಂಡು ಕ್ರಮ ಕೈಗೊಳ್ಳಬೇಕೆಂದು ಜನ ಆಗ್ರಹ ವ್ಯಕ್ತಪಡಿಸಿದ್ದಾರೆ.

## ಸ್ವಚ್ಛ ಭಾರತ ನಿರ್ಮಾಣಕ್ಕೆ ಎಲ್ಲರೂ ಕೈ ಜೋಡಿಸೋಣ :ನ್ಯಾ. ಉಂಡಿ ಮಂಜುಳಾ ಶಿವಪ್ಪ.

ನೈಜ್ಯ ದೇಸೆ ನ್ಯೂಸ್

**ಲಿಂಗಸಗೂರು: ತಾಲೂಕು ಕಾನೂನು ಸೇವಾ ಸಮಿತಿ, ಹಾಗೂ ವಕೀಲರ ಸಂಘ, ಪುರಸಭೆ, ಇವರುಗಳ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಸ್ವಚ್ಛತಾ ದಿನವನ್ನು ಪ್ರತಿವರ್ಷದಂತೆ ಜನವರಿ 30 ರಂದು 'ರಾಷ್ಟ್ರೀಯ ಸ್ವಚ್ಛತಾ ದಿನ'ವನ್ನು ನ್ಯಾ. ಉಂಡಿ ಮಂಜುಳಾ ಶಿವಪ್ಪ. ನ್ಯಾಯಾಲಯದ ಸಂಕೀರ್ಣ ಮತ್ತು ವಕೀಲರ ಭವನ ಸುತ್ತಮುತ್ತ ಸ್ವಚ್ಛ ಮಾಡುವದರ ಮೂಲಕ ಚಾಲನೆ ನೀಡಿಮಾತನಾಡಿದ ಅವರು.**




ಕೆಲಸದ ಸ್ಥಳ, ಮನೆಗಳು ಅಥವಾ ರೈಲ್ವೆ ನಿಲ್ದಾಣಗಳು, ಬಸ್ ನಿಲ್ದಾಣಗಳು, ಉದ್ಯಾನವನಗಳು ಇತರ ಸಾರ್ವಜನಿಕ ಸ್ಥಳಗಳಲ್ಲೂ ಸ್ವಚ್ಛತೆ ಕಾಪಾಡಲು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಇಂದು 'ರಾಷ್ಟ್ರೀಯ ಸ್ವಚ್ಛತಾ ದಿನ ಮಹಾತ್ಮ ಗಾಂಧಿ ಕಂಡ ಸ್ವಚ್ಛ ಭಾರತದ ಕನಸು ನನಸು ಮಾಡಲು ಪ್ರತಿಯೊಬ್ಬ ನಾಗರೀಕರು ಮುಂದಾಗಬೇಕಿದೆ ಎಂದು ಹೇಳಿದರು, ಈ ಸಂದರ್ಭದಲ್ಲಿ ಭೂಪನಗೌಡ ಪಾಟೀಲ್, ಅಧ್ಯಕ್ಷರು ವಕೀಲರ ಸಂಘ, ನಟರಾಜ ಪುರಸಭೆ ಮುಖ್ಯಾಧಿಕಾರಿ , ಬಸಲಿಂಗಪ್ಪ , ಬಾಲರಾಜ ಸಾಗರ ಮಾನಮಟ್ಟಿ , ದೇವೆಂದ್ರ ನಾಯಕ , ಹನುಮಂತ ರೆಡ್ಡಿ , ನ್ಯಾಯಾಲಯದ ಎಲ್ಲ ಸಿಬ್ಬಂದಿಗಳು, ವಕೀಲರು ಹಾಗೂ ಪುರಸಭೆ ಅಧಿಕಾರಿಗಳು, ಸಿಬ್ಬಂದಿಗಳು, ಸ್ವಚ್ಛತಾ ಸಿಬ್ಬಂದಿಗಳು, ಭಾಗವಹಿಸಿದ್ದರು.

## ಜಮೀನುಗಳಿಗೆ ತೆರಳುವ ರಸ್ತೆ ಬಂದ್ ತೆರವಿಗೆ ಕೆಆರ್‌ಎಸ್ ಆಗ್ರಹ

ನೈಜ್ಯ ದೇಸೆ ನ್ಯೂಸ್

**ಮಸ್ಕಿ: ತಾಲೂಕಿನ ಪಾಮನಕಲ್ಲೂರು ಗ್ರಾಮದ ಖಾಸಗಿ ವ್ಯಕ್ತಿಯೊಬ್ಬರು ರೈತರ ಜಮೀನುಗಳಿಗೆ ತೆರಳುವ ರಸ್ತೆಯನ್ನು ಬಂದ್ ಮಾಡಿದ್ದರಿಂದ ರೈತರು ಕರ್ನಾಟಕ ರೈತ ಸಂಘದ ನೇತೃವದಲ್ಲಿ ತಹಸೀಲ್ದಾರ್ ಮಂಜುನಾಥ ಭೋಗಾವತಿಗೆ ಮನವಿ ಪತ್ರ ಸಲ್ಲಿಸುವ ಮೂಲಕ ಆಗ್ರಹಿಸಿದರು.**

ನಂತರ ಸಂತೋಷ ಹಿರೇದಿನ್ನಿ ಮಾತನಾಡಿ ಪಾಮನಕಲ್ಲೂರು ಗ್ರಾಮದ ಸ.ನಂ. 3ರ ಜಮೀನಿನ ಮಾಲೀಕ ಶಿವರಾಜ ಗೊಬ್ಬೇರ ಎಂಬುವವರು ರಸ್ತೆಯನ್ನು ಬಂದ್ ಮಾಡಿದ್ದರಿಂದ 30-40 ರೈತರಿಗೆ ಕೃಷಿ ಚಟುವಟಿಕೆ ನಡೆಸಲು ರಸ್ತೆ ಇಲ್ಲದಂತಾಗಿದೆ. ಪಾಮನಕಲ್ಲೂರು-ಹಟ್ಟಿ ಮುಖ್ಯ ರಸ್ತೆಯ ಪಶ್ಚಿಮಕ್ಕೆ ಇವರ ಹೊಲ ಇರುತ್ತದೆ. ಮುಖ್ಯ ರಸ್ತೆಯಿಂದ ಸ.ನಂ. 172ರ ಮೂಲಕ ಶಿವರಾಜರವರ ಸ.ನಂ.3 ರಲ್ಲಿ ಹಾದಿಯಲ್ಲಿ



ರೈತರ ವಹಿವಾಡು ದಾರಿ ಇರುತ್ತದೆ. ಕಳೆದ ಕೆಲ ದಶಕಗಳಿಂದ ಈ ರಸ್ತೆಯ ಮೂಲಕ ರೈತರು ಓಡಾಡುತ್ತಿದ್ದರು. ಈ ರಸ್ತೆ ಬಿಟ್ಟರೆ ನಮ್ಮ 40 ಜನ ರೈತ ಕುಟುಂಗಳಿಗೆ ಬೇರೆ ರಸ್ತೆ ಇರುವುದಿಲ್ಲ. ಕಳೆದ ಒಂದು ವಾರದಿಂದ ಶಿವರಾಜ ದುರುಗಪ್ಪ ಗೊಬ್ಬೇರ ಈತನು ಈ ದಾರಿಯನ್ನು ಬಂದ್ ಮಾಡಿರುತ್ತಾನೆ.

ದಾರಿಗೆ ಅಡ್ಡಲಾಗಿ ದೊಡ್ಡ ತೆಗ್ಗು ಗುಂಡಿಗಳನ್ನು ನಿರ್ಮಿಸಿದ್ದಾನೆ. ರಸ್ತೆ ಬೇಕಾದರೆ 40 ಜನ ರೈತರು ದುಡ್ಡು ಕೊಟ್ಟು ರಸ್ತೆ ಪಡೆಯಬೇಕೆಂದು ಬೇದರಿಕೆ ಹಾಕುತ್ತಿದ್ದಾನೆ. ಆದ್ದರಿಂದ ಕೂಡಲೇ ರೈತರು ಓಡಾಡಲು ರಸ್ತೆಯ ವ್ಯವಸ್ಥೆ ಮಾಡಿಕೊಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ವೆಂಕಟೇಶ ಚಿಲ್ಕರಾಗಿ, ತಿರುಪತಿ ಮಸ್ಕಿ, ಮಾರುತಿ ಜಿನ್ನಾಪೂರ, ಚಂದಸಾಬ ಪಾಮನಕಲ್ಲೂರು, ಹೂವಪ್ಪ ಪಾಮನಕಲ್ಲೂರು ಸೇರಿದಂತೆ ಇನ್ನಿತರರಿದ್ದರು.

# ಸಾರ್ವಜನಿಕರಿಗೆ ರಸ್ತೆ ಸುರಕ್ಷತೆ ಜಾಗೃತಿ ಅಗತ್ಯ: ನ್ಯಾ.ಮಾರುತಿ ಬಾಗಡೆ

ನೈಜ್ಯ ದೇಸೆ ನ್ಯೂಸ್

**ರಾಯಚೂರು: ದೇಶದಲ್ಲಿ ಪ್ರತಿನಿತ್ಯ ಅಪಘಾತ ಪ್ರಕರಣಗಳು ಹೆಚ್ಚುತ್ತಿದ್ದು, ರಸ್ತೆ ಸುರಕ್ಷತೆಯ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಸೇರಿದಂತೆ ಪ್ರತಿಯೊಬ್ಬರು ಜಾಗೃತಿ ಹೊಂದುವ ಅಗತ್ಯವಿದೆ ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ ಬಾಗಡೆ ಅವರು ಹೇಳಿದರು.**

ಜನವರಿ 30ರ ಶುಕ್ರವಾರ ದಂದು ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾವಾದಿಗಳ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ರೋಟರಿ ಕ್ಲಬ್, ರೊಟರಿ ಕ್ಲಬ್ ಕೃಷ್ಣ ತುಂಗೆ ಮತ್ತು ಮಾನವ ಹಕ್ಕುಗಳು ಹಾಗೂ ಭ್ರಷ್ಟಚಾರ ವಿರೋಧಿ ಸಂಸ್ಥೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಾಕಷ್ಟು ಮಂದಿಗೆ ಅರಿವಿನ ಅಗತ್ಯವಿದ್ದು, ಹೆಲ್ಮೆಟ್




ರಹಿತ ಹಾಗೂ ಕುಡಿದ ಮತ್ತಿನಲ್ಲಿ ವಾಹನ ಚಾಲನೆ, ಮೊಬೈಲ್ ಫೋನ್ ಬಳಕೆ, ಅತೀವೇಗದಿಂದ ಚಾಲನೆ ಮಾಡುವುದರಿಂದ ಅನೇಕ ಸಾವು ನೋವುಗಳು ಸಂಭವಿಸುತ್ತಿವೆ. ಇವುಗಳ ನಿಯಂತ್ರಣಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದರು. ಪ್ರಸ್ತುತ ದಿನಮಾನಗಳಲ್ಲಿ ಯುವಕರು, ಚಿಕ್ಕ ಮಕ್ಕಳು ಅತ್ಯಂತ ವೇಗವಾಗಿ ದ್ವಿಚಕ್ರ ವಾಹನ ಚಾಲನೆ ಮಾಡುವ ಮೂಲಕ ಸಂಚಾರಿ ನಿಯಮಗಳನ್ನು ಯಾರೂ ಪಾಲಿಸುತ್ತಿಲ್ಲ. ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ್ದರಿಂದ ಆಕಸ್ಮಿಕ ಅಪಘಾತಗಳು ನಡೆಯುತ್ತವೆ. ಇದರಿಂದ ಜೀವ ಹಾನಿಯಾಗುತ್ತದೆ ಎಂದರು.

ದ್ವಿಚಕ್ರ ವಾಹನ ಚಾಲನೆ ಮಾಡುವವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಲೇಬೇಕು. ನ್ಯಾಯಾಲಯದಲ್ಲಿ ಬರುವ ಅಪಘಾತ ಪ್ರಕರಣಗಳಲ್ಲಿ ಹೆಚ್ಚಾಗಿ ತಲೆಗೆ ಪೆಟ್ಟು ಬಿದ್ದು ಸಾವನ್ನಪ್ಪಿದವು ಅಥವಾ ಅಂಗಾಂಗಗಳನ್ನು ಕಳೆದುಕೊಂಡ ಪ್ರಕರಣಗಳಾಗಿರುತ್ತವೆ. ಒಂದು ಸಾವಿರ ರೂ. ಹಣದ ಬಗ್ಗೆ ಯೋಚಿಸದೇ ಕೂಡಲೇ ಹೆಲ್ಮೆಟ್ ಖರೀದಿಸಿ ಬಳಸಿದಲ್ಲಿ ಅತ್ಯಮೂಲ್ಯವಾದ



ಈ ಜೀವನ ಉಳಿಯುತ್ತದೆ. ದ್ದರಿಂದ ಜನರು ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಬೇಕೆಂದರು. ಈ ವೇಳೆ ಕೃಷ್ಣ ತುಂಗೆ ರೋಟರಿ ಕ್ಲಬ್ ಅಧ್ಯಕ್ಷರಾದ ಪವನ ಕುಮಾರ್ ಕಿಶೋರ್ ಪಾಟೀಲ ಅವರು ಮಾತನಾಡಿ, ಹೆಲ್ಮೆಟ್ ಧರಿಸಿದೇ ವಾಹನ ಚಾಲನೆ ಮಾಡಿದಲ್ಲಿ ತಮ್ಮ ಜೀವನದ ಜೊತೆಗೆ ಕುಟುಂಬವನ್ನು ಅನಾಹುತಗಳಿಗೆ ತಳ್ಳಿದಂತಾಗುತ್ತದೆ ಎನ್ನುವ ತಿಳಿವಳಿಕೆ ಹೊಂದಬೇಕು ಎಂದರು.

ಈ ವೇಳೆ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ ಮಾತನಾಡಿ, ಬಿಸಿಲಿನ ಕಾರಣಕ್ಕೆ ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡುವ ಜನರು ಒಂದು ಅಂಶವನ್ನು ತಿಳಿದುಕೊಳ್ಳಬೇಕು. ಜೀವಕ್ಕಿಂತ ಬಿಸಿಲು ಅಷ್ಟೇನು ಮುಖ್ಯವಲ್ಲ. ಹೆಲ್ಮೆಟ್ ಧರಿಸುವ ಮೂಲಕ ಜೀವ ರಕ್ಷಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಗೌರವಾನ್ವಿತ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಡಿ.ಮಹಾವರಕರ್, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹತ್ತಿಕಾಳ್ ಪ್ರಭು ಸಿದ್ದಪ್ಪ, ಪ್ರಧಾನ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸಿದ್ದರಾಮಪ್ಪ ಕಲ್ಯಾಣರಾವ್, ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸುಧೀನ್ ಕುಮಾರ್ ಡಿ.ಜೆ., 2ನೇ ಹೆಚ್ಚುವರಿ ಹಿರಿಯ ಶ್ರೇಣಿ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಶ್ವೇತಾ ಸಿಂಗ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, 3ನೇ ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಕೃಪಾ ಸಿ.ಎಲ್., ಪ್ರಧಾನ ವ್ಯವಹಾರ ನ್ಯಾಯಾಧೀಶರಾದ ಚನ್ನಬಸಪ್ಪ ಆರ್.ಕೂಡಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿಲ್ಲಾ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳಾದ ಗುರುನಾಥ ರೆಡ್ಡಿ, ವಕೀಲರಾದ ಶಿವಶಂಕರ್, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಸದಸ್ಯರಾದ ಸಂಪತ್ತು ಕುಮಾರ್, ತಿರುಮಲ್ಲ ರೆಡ್ಡಿ, ಕೇಶರಾವ್ ಸೇರಿದಂತೆ ಇತರರು ಇದ್ದರು.

## ಸಾಹಿತ್ಯ ಸಿಂಚನ

ಎಣೆದ ಸುಳ್ಳು ಬಲೆಗೆ ಸಿಕ್ಕಿ
ಉಸಿರುಗಟ್ಟಿ ಚೀರಾಡಿದೆ
ಕುಣಿವೆ ತಪ್ಪು ನಿನ್ನದೆ ಇರಲು
ಮಂಕು ಕವಿದು ಹಾರಾಡಿದೆ

ಮನುಜ ಮತವು ಬೇಕು ಆಗ
ಆಗ ಬಲ್ಲೆ ಜನ ನಾಯಕ
ಕೋಪ ನಿನ್ನ ಸುಡದೆ ಬಿಡದು
ರಾಗ ಬರದ ಗಾಯಕ

ಜನರ ಪ್ರೀತಿ ಕಳೆದುಕೊಂಡೆ
ಏನು ಬಂತು ಅತ್ತರೆ
ಮನಕೆ ಅಂಜಿ ನಡೆಯದಾದೆ
ಕಸಕೆ ಹಣ್ಣು ಕೊಳೆತರೆ

ಹಟದ ಚಟವು ಒಳಿತು ಏನೊ
ಬಾಳು ಹಳಿಯ ತಪ್ಪದೆ
ಸೂತ್ರವಿರದ ಪಟದ ಹಾಗೆ
ದೇಹ ಚಟ್ಟವ ಅಪ್ಪದೆ

ಹೊಳೆಯ ನೀರಿಗೆ ಎದುರು ಈಜುತ
ಸುಮ್ಮನೇಕೆ ಮುಳುಗುವೆ
ಸುಳ್ಳು ನಂಜು ತೊರೆದು ನೋಡು
ಬೆಳಕಿನಂತೆಯೆ ಹೊಳೆಯುವೆ

**ತುಳಸಿದಾಸ ಬಿ ಎಸ್**

## ಕುರುಕುಂದಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ವಿದ್ಯುತ್ ತಗುಲಿ 5ನೇ ತರಗತಿ ವಿದ್ಯಾರ್ಥಿನಿ ತನುಶ್ರೀ ಸಾವು!

**❑ ನೈಜ್ಯ ದೆಸೆ ನ್ಯೂಸ್**

**ತಾಲೂಕಿನ ಕುರುಕುಂದಿ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆಯ 5ನೇ ತರಗತಿ ವಿದ್ಯಾರ್ಥಿನಿ ತನುಶ್ರೀ ವಿದ್ಯುತ್ ತಗುಲಿ ಮೃತಪಟ್ಟ ಘಟನೆ ಶುಕ್ರವಾರ ಬೆಳಿಗ್ಗೆ 11:30ರ ವೇಳೆಗೆ ನಡೆದಿದೆ ಎನ್ನಲಾಗಿದೆ. ಶಾಲೆಯಲ್ಲಿ ವಿರಾಮದ ವೇಳೆಯಲ್ಲಿ ಕುಡಿಯಲು ನೀರು ತರಲು ತೆರಳಿದ್ದ ಸಮಯದಲ್ಲಿ ವಿದ್ಯುತ್ ತಗುಲಿದ ಪರಿಣಾಮ ಗಂಭೀರವಾಗಿ ವಿದ್ಯಾರ್ಥಿನಿ ಗಾಯಗೊಂಡಿದ್ದಾಳೆ, ತಕ್ಷಣವೇ ನಗರದ ಖಾಸಗಿ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಿದರು ಸಹ ಫಲಕಾರಿಯಾಗದೆ ಮೃತಪಟ್ಟಿದ್ದಾಳೆ ಎಂದು ತಿಳಿದು ಬಂದಿದೆ.**



ಘಟನೆಯ ಮಾಹಿತಿ ತಿಳಿದ ಬಳಿಕ ತುರ್ವಿಹಾಳ ಪೊಲೀಸ್ ಠಾಣೆಯ ಪಿಎಸ್‌ಐ ಸುಜಾತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಶಾಲೆಯ ಮುಖ್ಯಗುರುಗಳು ಹಾಗೂ ಶಿಕ್ಷಕರಿಂದ ಮಾಹಿತಿ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿನಿಯ ಮೃತ ದೇಹವನ್ನು ಸಿಂಧನೂರು ನಗರದ ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಕಳಿಸಲಾಗಿದ್ದು, ಆಸ್ಪತ್ರೆಗೆ ಕಾಂಗ್ರೆಸ್ ಮುಖಂಡ ಆರ್.ಸಿದ್ದನಗೌಡ ಭೇಟಿ ನೀಡಿ ಮೃತ ವಿದ್ಯಾರ್ಥಿನಿಯ ಕುಟುಂಬಕ್ಕೆ ಸಾಂತ್ವಾನ ಹೇಳಿದರು.

## ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಬಳ್ಳಾರಿ ಜಿಲ್ಲಾಧ್ಯಕ್ಷರಾಗಿ ಯೋಗಗುರು ಎಂ.ಭಾಸ್ಕರ್ ಆಯ್ಕೆ

**❑ ನೈಜ್ಯ ದೆಸೆ ನ್ಯೂಸ್**

**ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಭಾಗವಾದ ಜಿಲ್ಲಾ ಜನಜಾಗೃತಿ ವೇದಿಕೆಯ ಅಡಿಯಲ್ಲಿ ನಡೆದ ಮದ್ಯವರ್ಜನ ಶಿಬಿರ, ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ, ನವಜೀವನ ಸಮಿತಿ, ತಂಬಾಕು ವಿರೋಧಿ ದಿನಾಚರಣೆ, ಮಾದಕ ವಸ್ತು ವಿರೋಧಿ ದಿನಾಚರಣೆ, ಜಾಗೃತಿ ಅಣ್ಣ ಮತ್ತು ಜಾಗೃತಿ ಮಿತ್ರ ಪ್ರಶಸ್ತಿ, ನವಜೀವನ ಸ್ವಸಹಾಯ ಸಂಘ, ಗಾಂಧಿ ಜಯಂತಿ ಕಾರ್ಯಕ್ರಮದಂತಹ ಅನೇಕ ಕಾರ್ಯಕ್ರಮಗಳು ಜನರ ಮೆಚ್ಚುಗೆ ಗಳಿಸಿವೆ.**



ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಬಳ್ಳಾರಿ ಜಿಲ್ಲೆಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಎಂ.ಭಾಸ್ಕರ್ ಇವರ ನೇತೃತ್ವದಲ್ಲಿ ಹೆಚ್ಚಿನ ಸೇವಾ ಕಾರ್ಯಗಳನ್ನು ಮಾಡಿ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಲಿ ಎಂದು ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ವೆಂಕನಗೌಡ ಪಾಟೀಲ್ ವಟಗಲ್, ಬೀರಪ್ಪ ಶಂಭೋಜಿ, ಡಾ.ಶರಣಪ್ಪ ಗೊರೇಬಾಳ, ಮರಿಬಸವರಾಜ ಬೊಮ್ಮನಾಳ, ಲಕ್ಷ್ಮೀದೇವಿ ಕಟ್ಟೆಪ್ಪ ಗುಂಜಳ್ಳಿ, ಹಾಗೂ ಶಂಕ್ರಪ್ಪ ವಜ್ರಬಂಡಿ, ಸೇರಿದಂತೆ ಅನೇಕರು ಅಭಿನಂದನೆಗಳನ್ನು ತಿಳಿಸಿದ್ದಾರೆ.

# ನಾಟಕದಿಂದ ಗಮನ ಸೆಳೆದ ಕಲಾವಿದರ ಮನೋಜ್ಞ ಅಭಿನಯ

**❑ ನೈಜ್ಯ ದೆಸೆ ನ್ಯೂಸ್**

**ಕೊಪ್ಪಳ: ಬಹುತೇಕ ಮೊದಲ ಬಾರಿಗೆ ರಂಗಪ್ರವೇಶ ಮಾಡಿದ ಯುವ ಕಲಾವಿದರ ಮನೋಜ್ಞ ಅಭಿನಯ, ನಾಟಕದ ಕೊನೆಯವರೆಗೂ ಪ್ರೇಕ್ಷಕರು ಕಣ್ಣು ದಿಟ್ಟಿಸಿಕೊಂಡು ನೋಡಿದ ಸನ್ನಿವೇಶಗಳು, ಯಶಸ್ವಿಯಾಗಿ 29ನೇ ಪ್ರದರ್ಶನ ಪೂರ್ಣಗೊಂಡ ಬಳಿಕ ನೂರಾರು ಸಂಖ್ಯೆಯ ಪ್ರೇಕ್ಷಕರಿಂದ ಕೇಳಿಬಂದ ಕರತಾಡನ.**

ಇದು ಇಲ್ಲಿನ ಸಾಹಿತ್ಯ ಭವನದಲ್ಲಿ ಬುಧವಾರ ರಾತ್ರಿ ಕಂಡುಬಂದ ಚಿತ್ರಣ. ರಾಷ್ಟ್ರೀಯ ಚಿಂತನಾ ವೇದಿಕೆ ಸಹಯೋಗದಲ್ಲಿ ಪ್ರದರ್ಶನವಾದ ನಿಜಮಹಾತ್ಮ ಬಾಬಾಸಾಹೇಬ್ ಎಂಬ ನಾಟಕ ಪ್ರದರ್ಶನ ಪ್ರೇಕ್ಷಕರನ್ನು ಸೆಳೆಯಿತು. ನಾಟಕದ ಕೊನೆಯ ತನಕವೂ ಸಾಹಿತ್ಯ ಭವನ ಭರ್ತಿಯಾಗಿ-ತ್ತು. ಕೂಡಲು ಸೀಟು ಸಿಗದ ಕಾರಣಕ್ಕೆ ಅನೇಕರು ನಿಂತುಕೊಂಡು ನಾಟಕ ವೀಕ್ಷಿಸಿದ್ದು ವಿಶೇಷವಾಗಿ-




ತ್ತು. ಡಾ.ಬಿ.ಆರ್. ಅಂಬೇಡ್ಕರ್ ಪಾತ್ರದಾರಿಯ ಪ್ರತಿ ಮಾತುಗಳಿಗೂ ಜನರಿಂದ ಚಪ್ಪಾಳೆ ಬಂದವು.

ನಾಟಕ ಪೂರ್ಣಗೊಂಡ ಬಳಿಕ ಮಾತನಾಡಿದ ರಂಗಭೂಮಿ ಟ್ರಸ್ಟ್ ಅಧ್ಯಕ್ಷ ಅಡ್ಡಂಡ ಕಾರ್ಯಪ್ಪ 'ನಮ್ಮ ತಂಡದ ಅತ್ಯುತ್ತಮ ಪ್ರದರ್ಶನಗಳಲ್ಲಿ ಇದೂ ಒಂದು. ಕೊಪ್ಪಳ ನಿಜವಾಗಿಯೂ ಕೊಪ್ಪಳವಾಗಿ ಉಳಿದುಕೊಂಡಿದೆ. ಇಲ್ಲಿನ ಜನರ ಶಿಸ್ತು, ಸಂಂ-ಭ್ರಮ ನೋಡಿ ಖುಷಿಯಾಗಿದೆ. ಸತತ ಮೂರು ತಿಂಗಳು ಕಲಾವಿದರು ತಾಲೀಮು ನಡೆಸಿ ಅದನ್ನು ಜನರ ಮುಂದಿಟ್ಟಿದ್ದೇವೆ' ಎಂದರು. 'ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ನಾಟಕ ಪ್ರದರ್ಶನ ಮಾಡುವುದು ಸುಲಭದ ಮಾತಲ್ಲ. ಆದರೆ ಜನರ ಮುಂದೆ ಸತ್ಯ ಇರಿಸಿದ್ದೇವೆ'



ಎಂದ ಅವರು 'ಕಾಂಗ್ರೆಸ್ ಪಕ್ಷ ಮತಬ್ಯಾಂಕ್ ರಾಜಕಾರಣಕ್ಕಾಗಿ ಅನೇಕ ಮಹನೀಯರನ್ನು ಕೊಲೆ ಮಾಡಿದೆ. ಮತಕ್ಕಾಗಿ ಅಂಬೇಡ್ಕರ್ ಅವರ ಭಾವಚಿತ್ರ ಬಳಸಿಕೊಂಡಿದೆ. ಕೊಪ್ಪಳದಲ್ಲಿ ಹಿಂದೂ ಧರ್ಮ ಎದ್ದು ಬರಬೇಕು. ಆ ಹಿಂದೂ ದೇಶಭಕ್ತನಾಗಿರಬೇಕು. ಟೋಪಿ ಹಾಕುವವರನ್ನು, ಗಡ್ಡ ಬಿಟ್ಟವರನ್ನು ಬೆಂಬಲಿಸುವುದು ಬಿಡಬೇಕು' ಎಂದು ಹೇಳಿದರುಸಾಹಿತ್ಯ ಭವನದಲ್ಲಿ ನಾಟಕ ನೋಡಲು ಸೇರಿದ್ದ ಪ್ರೇಕ್ಷಕರು.

# ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ವಿಶ್ವ ಕುಷ್ಠರೋಗ ದಿನಾಚರಣೆ ಜಾಗೃತಿ ಸಂದೇಶ ಸಾರಿದ ತಜ್ಞರು




**❑ ನೈಜ್ಯ ದೆಸೆ ನ್ಯೂಸ್**

ಸಿಂಧನೂರು: ನಗರದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಜನವರಿ 30ರಂದು ವಿಶ್ವ ಕುಷ್ಠರೋಗ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. **ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಹಾಗೂ ಸಾಮಾಜಿಕ ಹೊಣೆಗಾರಿಕೆ ಮನೋಭಾವ ಬೆಳೆಸುವ ಉದ್ದೇಶದಿಂದ ವಿಶೇಷ ಉಪನ್ಯಾಸ ಮತ್ತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.**

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು, ವಿಶ್ವ ಕುಷ್ಠರೋಗ ದಿನವನ್ನು ಪ್ರತಿವರ್ಷ ಜನವರಿ 30ರಂದು ಆಚರಿಸಲಾಗುತ್ತದೆ. ಕುಷ್ಠರೋಗ (ಹ್ಯಾನ್ಸೆನ್ಸ್ ಕಾಯಿಲೆ) ಕುರಿತು ಜಾಗೃತಿ ಮೂಡಿಸಲು, ರೋಗಿಗಳ ಮೇಲಿನ ಕಳಂಕ ನಿವಾರಿಸಲು ಮತ್ತು ಅವರಿಗೆ ಸಾಮಾಜಿಕ ಸಮಾನತೆ ಒದಗಿಸಲು ಈ ದಿನವನ್ನು ಆಚ-ರಿಸಲಾಗುತ್ತದೆ ಎಂದು ಹೇಳಿದರು. ಭಾರತದಲ್ಲಿ ಮಹಾತ್ಮಾ ಗಾಂಧೀಜಿಯವರ ಪುಣ್ಯತಿಥಿ-ಯ ದಿನವೇ ಇದನ್ನು ಆಚರಿಸಲಾಗುತ್ತದೆ.

ಫ್ರೆಂಚ್ ಮಾನವತಾವಾದಿ ರೌಲ್ ಫೋಲೆರೊ ಅವರು 1954ರಲ್ಲಿ ಈ ದಿನಾಚರಣೆಯನ್ನು ಪ್ರಾರಂಭಿಸಿದ್ದರು ಎಂದು ವಿವರಿಸಿದರುಈ ಕಾರ್ಯಕ್ರಮದಲ್ಲಿ ಸನ್ ರೈಸ್ ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ., ನರ್ಸಿಂಗ್ ಕಾಲೇಜಿನ ಪ್ರಾಚಾರ್ಯ ಲಾಜರ್ ಸಿರಿಲ್, ಉಪನ್ಯಾಸಕರಾದ ವೀರೇಶ್, ಅಶುಪಾಷ, ವೀರೇಶ್ವರಿ, ಜ್ಞಾನೇಶ್ವರಿ, ಶೋಭಾ ಹಾಗೂ ವಿದ್ಯಾರ್ಥಿ?ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಮಹಾತ್ಮಾ ಗಾಂಧಿಜೀರವರ ಕನಸಾದ ಕುಷ್ಠರೋಗ ಮುಕ್ತ ಭಾರತ ಮಾಡಲು ಆರಂಭದಲ್ಲಿಯೇ ರೋಗ ಪತ್ತೆಗೆ ಎಲ್ಲರೂ ಶ್ರಮೀಸೋಣ.

**❑ ನೈಜ್ಯ ದೆಸೆ ನ್ಯೂಸ್**

**ನರ ಮತ್ತು ಚರ್ಮದ ಖಾಯಿಲೆಯಾಗಿರುವ ಹಾಗೂ ಶತ ಶತಮಾನಗಳಿಂದ ಇಂದಿಗೂ ಸಮುದಾಯದಲ್ಲಿರುವ ಕುಷ್ಠರೋಗವನ್ನು ನಿರ್ಮೂಲನೆ ಮಾಡಲು, ಯಾರಿಗಾದರೂ ದೇಹದ ಮೇಲೆ ಸ್ಪರ್ಶಜ್ಞಾನವಿಲ್ಲದ ತಿಳಿಬಿಳಿ ತಾಮ್ರವರ್ಣದ ಮಚ್ಚೆಗಳು ಇದ್ದಲ್ಲಿ, ಕೈಕಾಲುಗಳಲ್ಲಿ ಜೋಮು ಕಂಡು ಬಂದಲ್ಲಿ ಹತ್ತಿರದ ಸರಕಾರಿ ಆಸ್ಪತ್ರೆಯಲ್ಲಿ ತಪಾಸಣೆ ಮಾಡಿಸಿ ಖಚಿತಪಟ್ಟಲ್ಲಿ ಚಿನ್ಹೆಗಳ ಆಧಾರದ ಮೇಲೆ 6 ತಿಂಗಳಿನಿಂದ ಒಂದು ವರ್ಷದ ಅವಧಿಯ ಉಚಿತ ಚಿಕಿತ್ಸೆ ಪಡೆದು ಸಂಪೂರ್ಣ ಗುಣಮುಖರಾಗಲು ನಾವೆಲ್ಲರೂ ಜಾಗೃತಿ ನೀಡೋಣವೆಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ ಮಹಮ್ಮದ್ ಶಾಕೀರ್ ತಿಳಿಸಿದರು.**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ



ಕಾರ್ಯಕ್ರಮದಡಿ, ಸ್ಪರ್ಶ್ ಕುಷ್ಠರೋಗ ಜಾಗೃತಿ ಆಂದೋಲನದಡಿ ರಾಯಚೂರುನ ಮಂತ್ರಾಲಯ ರಸ್ತೆಯಲ್ಲಿಯ ಕಾಶಿ ವಿಶ್ವನಾಥ ದೇವಸ್ಥಾನದ ಹತ್ತಿರದ ಕಾಲೋನಿಯಲ್ಲಿ ಜಾಗೃತಿ ನೀಡಿ ಮಾತನಾಡುತ್ತಾ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ರವರ ಮಾರ್ಗದರ್ಶನದಲ್ಲಿ ಜನೇವರಿ 30 ರಿಂದ ಫೇಬ್ರುವರಿ 13 ರವರೆಗೆ ಜಿಲ್ಲೆಯಾದ್ಯಂತ ಅಂತರ ಇಲಾಖೆಗಳ ಸಮನ್ವಯದೊಂದಿಗೆ, ಇದು ಮೈಕೊ ಬ್ಯಾಕ್ಟಿ-ರಿಯಂ ಲೇಪ್ರೆ ಎಂಬ ಸೂಕ್ಷ್ಮಾಣುವಿನಿಂದ ಬರುವ ಹಾಗೂ ಖಾಯಿಲೆ ಹೊಂದಿದ ವ್ಯಕ್ತಿ ಕೆಮ್ಮುದಾಗ, ಸಿನಿದಾಗ ಬ್ಯಾಕ್ಟಿರಿಯಾವು ಉಸಿರಿನ ಮೂಲಕ ಜೊತೆಗಿರುವವ-ರಿಗೆ ದೀರ್ಘಾವಧಿಯಲ್ಲಿ ಬರುತ್ತದಾದರೂ ಸಹ ಸೂಕ್ತ ಚಿಕಿತ್ಸೆಯಿಂದ ಸಂಪೂರ್ಣ ಗುಣಮುಖವಾಗುವುದೆಂದು ತಿಳಿಸಿದರು.

ಜಹೀರಬಾದ ನಗರ ಪ್ರಾಥಮಿಕ ಆರೋಗ್ಯ ವೈದ್ಯಾಧಿಕಾರಿ ಡಾ ಶ್ವೇತಾಂಬರಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ,ಅಸಿಸ್ ಆಸ್ಪತ್ರೆ ವೈದ್ಯರಾದ ಡಾ ಟೀನ್, ಶುಶ್ರೂಷಕಿ ರಿಟ್ನಾ, ಡಿವೈಹೆಚ್‌ಇಓ ಬಸಯ್ಯ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ, ಭೀಮೇಶಪ್ಪ, ಡಿ ಸುರೇಶ್, ದೊಡ್ಡಮನಿ ಬಿಬಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ ಕೆ, ಎಲ್‌ಟಿಓ ಸಾಯಿರಾಬಾನು, ಮೃತ್ಯುಂಜಯ, ಹೆಚ್‌ಐಓ ಮಹೇಂದ್ರ, ರೇಶ್ಮಾ ರಾಜೇಶ್ವರಿ, ಪಿಎಮ್‌ಡಬ್ಲೂ ರಾಜು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಶಾರದಾ, ಪದ್ಮಾ, ಆಶಾ ಕಾರ್ಯಕರ್ತೆ ಸುಮಲತಾ, ಸಾವಿತ್ರಿ, ಸಿದ್ದಲಿಂಗಮ್ಮ, ಅಂಗನವಾಡಿ ಕಾರ್ಯಕರ್ತೆ ಗದ್ದೆಮ್ಮ ಸೇ-ರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ನಿರಂತರ ಅಭ್ಯಾಸ, ಏಕಾಗ್ರತೆಯಿಂದ ವ್ಯಕ್ತಿತ್ವ ವಿಕಾಸನ: ಗಿರಿಧರ ಪೂಜಾರ್



**❑ ನೈಜ್ಯ ದೆಸೆ ನ್ಯೂಸ್**

**ಹಾಲಾಪೂರ ಗ್ರಾಮದಲ್ಲಿರುವ ದಿ ಬೆಸ್ಟ್ ಪಬ್ಲಿಕ್ ವಿದ್ಯಾ ಸಂಸ್ಥೆಯಲ್ಲಿ ವ್ಯಕ್ತಿತ್ವ ವಿಕಾಸನ ಶಿಬಿರ ನಡೆಯಿತು. ಈ ಕಾರ್ಯಕ್ರಮದಲ್ಲಿ ನಾಡಿನ ಹೆಸರಾಂತ ವಾಗ್ಮಿಗಳಾದ ಶ್ರೀ ಗಿರಿಧರ್ ಪೂಜಾರ್ ಮಕ್ಕಳಿಗೆ ವ್ಯಕ್ತಿತ್ವ ವಿಕಾಸನ ಕು-ರಿತು ಅತ್ಯುತ್ತಮ ಸಲಹೆಗಳನ್ನು ಹಾಗೂ ವಿದ್ಯಾರ್ಥಿಗಳ ಜೀವನದ ಬದುಕು ,ಗುರಿಗಳ ಬಗ್ಗೆ ವಿದ್ಯಾರ್ಥಿಗಳು ಕಡ್ಡಾಯವಾಗಿ ಇರಬೇಕಾದ ಗೌರವ ಸಮರ್ಪಣೆ ಭಾವನೆ ಹೊಂದಬೇಕು,**

ನಿರಂತರ ಅಭ್ಯಾಸ ಕ್ರಿಯಾಶೀಲತೆಯಿಂದ ತೊಡಗಬೇಕು, ಆಟ ಮತ್ತು ಪಾಠ ಎರಡಕ್ಕೂ ಆದ್ಯತೆ ಕೊಡಬೇಕು, ಮೊಬೈಲ್,ಟಿವಿಗಳಿಂದ ಆದಷ್ಟು ದೂರವಿದ್ದು, ವಿದ್ಯಾಭ್ಯಾಸದ ಕಡೆ ಹೆಚ್ಚು ಗಮನ ಕೊಡಬೇಕು ಎಂದು ಇನ್ನು ಉಪಯುಕ್ತ ಸಲಹೆಗಳನ್ನು ನೀಡಿದರು. ನಂತರ ಸಂಸ್ಥೆಯ ವತಿಯಿಂದ ಶ್ರೀಯುತರಿಗೆ ಗೌರವ ಸನ್ಮಾನ ಮಾಡಲಾಯಿತು ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಬಿ ಗದ್ದೆಪ್ಪ , ಉಪಾಧ್ಯಕ್ಷ ಕೆ ಶೇಖರಪ್ಪ, ಕಾರ್ಯದರ್ಶಿ ಬಿ ಸಿದ್ದು , ಪ್ರೌಢಶಾಲಾ ಮುಖ್ಯಗುರು ರವಿಕುಮಾರ ತೋರಣದಿನ್ನಿ, ಪ್ರಾಥಮಿಕ ಶಾಲಾ ವಿಭಾಗದ ಮುಖ್ಯಗುರು ಕುಮಾರ ಮಸ್ಕಿ, ಶಿಕ್ಷಕರಾದ ಕುಪ್ಪಣ್ಣ. ಕೃಷ್ಣಕುಮಾರ. ದೇವೇಂದ್ರಪ್ಪ ಹಾಗೂ ಇನ್ನಿತರ ಶಿಕ್ಷಕ, ಶಿಕ್ಷಕಿಂ-ಯರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ರಾಯಚೂರು ಉತ್ಸವ: ಜಿಲ್ಲಾಮಟ್ಟದ ಉದ್ಯೋಗ ಮೇಳದ ಸಿದ್ಧತೆಗೆ ಸೂಚನೆ

**❑ ನೈಜ್ಯ ದೆಸೆ ನ್ಯೂಸ್**

**ರಾಯಚೂರು: ರಾಯಚೂರು ಜಿಲ್ಲಾ ಉತ್ಸವ-2026ರ ಹಿನ್ನೆಲೆಯಲ್ಲಿ ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಸಂಜೀವಿನಿ ಕೆ. ಎಸ್.ಆರ್.ಎಲ್.ಪಿ.ಎಸ್, ಡಿಡಿಯು-ಜಿಕೆವೈ ಯೋಜನೆಯಡಿ ಜಿಲ್ಲಾ ಮಟ್ಟದದಲ್ಲಿ ಒಂದು ದಿನದ ಉದ್ಯೋಗ ಮೇಳವನ್ನು ಫೆ.06ರಂದು ನಗರದ ಕೃಷಿ ವಿವಿಯ ಆವರಣದಲ್ಲಿ ಆಯೋಜಿಸಲಾಗಿದೆ. ಈ ಮೇಳದ ಯಶಸ್ವಿಗಾಗಿ ಸಂಬಂಧಿಸಿದ ಅಧಿಕಾ-ರಿಗಳು ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಅವರು ಹೇಳಿದರು.**

ಜನವರಿ 30ರ ಶುಕ್ರವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ



ಉದ್ಯೋಗ ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮೇಳಯುವ ಅಂದು ಬೆಳಿಗ್ಗೆ 9 ಗಂಟೆಗೆ ಚಾಲನೆ ದೊರೆಯಲಿದೆ. ವೇದಿಕೆಯ ಸುತ್ತಲೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಬೇಕು. ಮೇಳದಲ್ಲಿ ಎಸ್‌ಎಸ್‌ಎಲ್‌ಸಿಯಿಂದ ಮೊದಲುಗೊಂಡು ಪಿಯುಸಿ, ಸಾಮಾನ್ಯ ಪದವಿ, ಡಿಪ್ಲೊಮಾ, ಐಟಿಐ, ಇಂಜಿನಿಯರಿಂಗ್, ನರ್ಸಿಂಗ್ ಸೇರಿದಂತೆ ವಿವಿಧ ಅರೆ ವೈದ್ಯಕೀಯ ಕೋರ್ಸ್‌ಗಳನ್ನು ಕಲಿತವರಿಗೆ ಉದ್ಯೋಗಾವಕಾಶ ಕಲ್ಪಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ. ಸಾವಿರಾರೂ ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ.

ಮೇಳದಲ್ಲಿ ನೂರಾರು ಉದ್ಯೋಗದಾತರು (ಕಂಪೆನಿಗಳು) ಭಾಗವಹಿಸಲಿದ್ದು, ಈಗಾಗಲೇ ನೋಂದಣಿ ಮಾಡಿಸಿದ್ದಾರೆ. ಅವರ ಸಂಖ್ಯೆ ಇನ್ನೂ ಹೆಚ್ಚಳವಾಗಬಹುದು ಎಂದರು. ಜನವರಿ 30ರ ಗುರುವಾರ ಬೆಳಿಗ್ಗೆ 10 ಗಂಟೆಗೆ ಸುಮಾರಿಗೆ 4,967 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಇನ್ನು ನೋಂದಣೆ ಪ್ರಕ್ರಿಯೆ ಹೆಚ್ಚಳವಾಗಲಿದೆ. ಮೇಳದಲ್ಲಿ ಆಯ್ಕೆಯಾದವರಿಗೆ ಸ್ಥಳದಲ್ಲಿಯೇ ಆಫರ್ ಲೆಟರ್ ಕೊಡಲಿದ್ದಾರೆ ಎಂದರು. ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಉದ್ಯೋಗಾಕಾಂಕ್ಷಿಗಳು ಜಾಲತಾಣ hhttps://udyogamela.ksdckarnataka.com ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡು ಭಾಗವಹಿಸಬಹುದಾಗಿರುತ್ತದೆ.

ಹಾಗೂ ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಉದ್ಯೋಗದಾತರು/ಕಂಪನಿಗಳು ಸಹ ತಮ್ಮಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳ ವಿವರಗಳೊಂದಿಗೆ hhttps://employer.ksdckarna-taka.com/login ಈ ಜಾಲತಾಣದಲ್ಲಿ ನೋಂದಾಯಿಸಿಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಈ ಬಗ್ಗೆ ಇನ್ನೂ ಹೆಚ್ಚಿನ ಪ್ರಚಾರ ನೀಡಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರಾದ ರಾಜಕುಮಾರ್ ಪಾಟೀಲ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯವಸ್ಥಾಪಕರಾದ ಸಂತೋಷ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಘದ ಕಾರ್ಯದರ್ಶಿ ಜಂಬಣ್ಣ, ಎಸ್.ಬಿ.ಐ ಆರ್‌ಸೇಟ್ ನಿರ್ದೇಶಕರಾದ ವಿಜಯಕುಮಾರ್, ಜಿಲ್ಲೆಯ ವಿವಿಧ ಐಟಿಐ ಕಾಲೇಜ್ ಮುಖ್ಯಸ್ಥರಾದ ಶಿವರಾಜ ಕುಮಾರ್, ರುದ್ರಗೌಡ, ಹೈದರಾಸಾಬ್, ತೋಮಸಪ್ಪ, ರಾಮಣ್ಣ ಸೇರಿದಂತೆ ಇತರರು ಇದ್ದರು.

## ನೇಮಕಾತಿ ಪ್ರಕಟಣೆ

ಕರ್ನಾಟಕ ಅಂಚೆ ವೃತ್ತ ನೇಮಕಾತಿ 2026 ? 1023 ಗ್ರಾಮೀಣ ಡಾಕ್ ಸೇವಕ (BPM/ABPM) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಕರ್ನಾಟಕ ಅಂಚೆ ವೃತ್ತ ನೇಮಕಾತಿ 2026: 1023 ಗ್ರಾಮೀಣ ಡಾಕ್ ಸೇವಕ (BPM/ABPM) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅಂಚೆ ವೃತ್ತವು ಜನವರಿ 2026 ರ ಕರ್ನಾಟಕ ಅಂಚೆ ವೃತ್ತದ ಅಧಿಕೃತ ಅಧಿಸೂಚನೆಯ ಮೂಲಕ ಗ್ರಾಮೀಣ ಡಾಕ್ ಸೇವಕ (BPM/ABPM) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಫೆಬ್ರವರಿ 14, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 31–01–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14–ಫೆಬ್ರವರಿ–2026 ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 16–02–2026 ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸುವುದು: 16–02–2026 ಅರ್ಜಿದಾರರಿಗೆ ಸಂಪಾದನೆ/ತಿದ್ದುಪಡಿ ದಿನಾಂಕ: 18 ರಿಂದ 19 ಫೆಬ್ರವರಿ 2026 ಅಧಿಕೃತ ವೆಬ್‌ಸೈಟ್: indiapost.gov.in

## ಕುಷ್ಟರೋಗ ಶಾಪವಲ್ಲ ಪಾಪವಲ್ಲ ಸೂಕ್ತ ಚಿಕಿತ್ಸೆ ಕೊಡಿಸಿ :ಡಾಕ್ಟರ ಬಸವಲಿಂಗಯ್ಯ ಸ್ವಾಮಿ




ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ. ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಸರಕಾರಿ ಪ್ರೌಢಶಾಲೆ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಕುಷ್ಟರೋಗ ಕು–ರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.**

ಡಾಕ್ಟರ್ ಬಸವಲಿಂಗಯ್ಯ ಸ್ವಾಮಿ ಪ್ರಾಚಾರ್ಯರು ಅವರು ಮಾತನಾಡಿ ಕುಷ್ಟರೋಗ ಶಾಪವಲ್ಲ ಪಾಪುವಲ್ಲ ಯಾವುದೇ ಮೂಡನಂಬಿಕೆಗೆ ಬಲಿಯಾಗದೆ ಸರಕಾರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಕೊಡಿಸಿ ಎಂದರು, ನಂತರ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಇಂದು ಮಹಾತ್ಮ ಗಾಂಧೀಜಿಯವರ ಪುಣ್ಯ ಸ್ಮರಣೆ ದಿನದ ಅವರನ್ನು ಸ್ಮರಿಸುತ್ತಾ, ಅವರು ಕಂಡಿದ್ದ ಕುಷ್ಟರೋಗ ಮುಕ್ತ ಭಾರತವನ್ನು ಮಾಡಲು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಕುಷ್ಠರೋಗ ಚರ್ಮ ಮತ್ತು ನರಗಳಿಗೆ ಬರುವಂತಹ ಕಾಯಿಲೆ ಪ್ರಾರಂಭ ಹಂತದಲ್ಲಿ ಕಂಡುಹಿಡಿದು ಬೇಗನೆ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ಆರೋಗ್ಯವಾಗಿರಬಹುದಾಗಿದೆ.

ಕುಷ್ಟರೋಗದ ಲಕ್ಷಣಗಳಾದ ತಿಳಿ ಬಳಿ ತಾಮ್ರ ಬಣ್ಣದ ಸ್ಪರ್ಶಜ್ಞಾನ ಇಲ್ಲದ ಮಚ್ಚೆಗಳು ಮಚ್ಚೆಯ ಮೇಲೆ ಕೂದಲು ಇಲ್ಲದಿರುವುದು ಮತ್ತು ಸ್ಪರ್ಶವನ್ನು ಕಳೆದುಕೊಂಡಿರುವುದು ಹಾಗೂ ನರಗಳಲ್ಲಿ ಜೂಮ್ ಹಿಡಿಯುವುದು ಕುಷ್ಟರೋಗದ ಲಕ್ಷಣವಾಗಿರುತ್ತದೆ ಇಂಥ ಲಕ್ಷಣಗಳು ಕಂಡು ಬಂದರೆ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷೆ ಮಾಡಿಸಿಕೊಂಡು ರೋಗ ಖಚಿತಪಟ್ಟರೆ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತದೆ. ಯಾವುದೇ ಭಯಭೀತರಾಗದೆ ಕಳಂಕಕ್ಕೆ ಒಳಗಾಗದೆ ಸೂಕ್ತವಾದ ಚಿಕಿತ್ಸೆಯನ್ನು ಪಡೆದುಕೊಂಡು ಆರೋಗ್ಯವಂತರಾಗಿರಬೇಕು.

ಎಂದು ಕುಷ್ಠರೋಗ ನಿರ್ಮೂಲನಾ ಕುರಿತು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ತರಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಡಾಕ್ಟರ ಬಸವಲಿಂಗಯ್ಯ ಸ್ವಾಮಿ ಮತ್ತು ಉಪನ್ಯಾಸಕರಾದ ಸಾಬಣ್ಣ ಸರಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ಜಿ. ಎಸ್. ಪಾಟೀಲ್, ಹಾಗೂ ಆರೋಗ್ಯ ನಿರೀಕ್ಷಣಾಧಿಕಾ–ರಿಗಳಾದ ಮಹೇಶ. ಉದಯ ಕುಮಾರ. ಅಂಬಮ್ಮ ಹಾಗೂ ಉಪನ್ಯಾಸಕರು, ಶಿಕ್ಷಕರು. ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು

## ಫೆ.1ರಂದು ರಾಯಚೂರು ಜಿಲ್ಲೆಯಲ್ಲಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಫೆಬ್ರವರಿ 01 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ಹೊರಟು 11 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು.**



ಅಲ್ಲಿಂದ 11.10ಕ್ಕೆ ಹೆಲಿಕ್ಯಾಪ್ಟರ್ ಮೂಲಕ ಹೊರಟು 11.40ಕ್ಕೆ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಬಂಡೊಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹೆಲಿಪ್ಯಾಡ್ ಗೆ ಆಗಮಿಸಿ, ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದ ಕನಕ ಗುರುಪೀಠದ ಶಾಖಾ ಮಠದಿಂದ ನಡೆಯುವ ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ಮಧ್ಯಾಹ್ನ 3.30ಕ್ಕೆ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದಿಂದ ನಿರ್ಗಮಿಸಿ ಸುರಪುರ ತಾಲೂಕಿನ ಬಂಡೊಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹತ್ತಿರದ ಹೆಲಿಪ್ಯಾಡನಿಂದ ನಿರ್ಗಮಿಸಿ ಕಲಬುರಗಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಂಧನೂರಿನ ಕಾರುಣ್ಯಾಶ್ರಮಕ್ಕೆ ಕೊಪ್ಪಳದ ಅಭಿನವ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳ ಪಾದ ಸ್ಪರ್ಶ



ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಡೆದಾಡುವ ದೇವರು ತ್ರಿವಿಧ ದಾಸೋಹ ಮೂರ್ತಿಗಳಾದ ಕೊಪ್ಪಳ ಗವಿಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಇಂದು ಕಾರುಣ್ಯ ಕುಟುಂಬಕ್ಕೆ ಪಾದಸ್ಪರ್ಶ ಮಾಡಿ ಎಲ್ಲಾ ವೃದ್ಧರ ಹಾಗೂ ಬುದ್ಧಿಮಾಂದ್ಯರ ಯೋಗಕ್ಷೇಮವನ್ನು ವಿಚಾರಿಸಿ ಹಣ್ಣು ಹಂಪಲುಗಳನ್ನುವಿತರಿಸಿಆತ್ಮಸ್ಥೈರ್ಯತುಂಬಿದರು.

ಈ ಸಮಯದಲ್ಲಿ ಆಶ್ರಮದ ಸಂಪೂರ್ಣ ನಿರ್ವಹಣೆಯ ಬಗ್ಗೆ ಮಾಹಿತಿ ಪಡೆದು ಕಾರುಣ್ಯ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿ ಆಶೀರ್ವದಿಸಿದರು. ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ತ್ರಿವಿಧ ದಾಸೋಹಿ ಮೂರ್ತಿಗಳಾದ ಕೊಪ್ಪಳ ಗವಿಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಕಾರುಣ್ಯ ಆಶ್ರಮಕ್ಕೆ ಪಾದಸ್ಪರ್ಶ ಮಾಡಿ ಎಲ್ಲಾ ವೃದ್ಧರ ಹಾಗೂ ಬುದ್ಧಿಮಾಂದ್ಯರ ಯೋಗಕ್ಷೇಮವನ್ನು ವಿಚಾರಿಸಿ ಹಣ್ಣು ಹಂಪಲುಗಳನ್ನು ವಿತರಿಸಿ ಆತ್ಮಸ್ಥೈರ್ಯ ತುಂಬಿದರು.

ಈ ಸಮಯದಲ್ಲಿ ಆಶ್ರಮದ ಸಂಪೂರ್ಣ ನಿರ್ವಹಣೆಯ ಬಗ್ಗೆ ಮಾಹಿತಿ ಪಡೆದು ಕಾರುಣ್ಯ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿ ನಾಡಿನ ಹರ–ಗುರು ಚರಮೂರ್ತಿಗಳ ಆಶಯದಂತೆ ಕಾರುಣ್ಯ ಕುಟುಂಬದ ಸೇವೆ ಜರುಗುತ್ತಿದೆ. ಎಂದು ಆಶ್ರಮದ ಸೇವಾಕರ್ತ ದಂಪತಿಗಳಾದ ಸುಜಾತ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಹಾಗೂ ಸೇವಾ ಕರ್ತರುಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ ಮರಿಯಪ್ಪ ಜ್ಯೋತಿ ಇವರೆಲ್ಲರುಗಳಿಗೆ ಆಶೀರ್ವದಿಸಿದರು. ಈ ಸಮಯದಲ್ಲಿ ಕೊಪ್ಪಳ ಗವಿಸಿದ್ದೇಶ್ವರ ಶ್ರೀ ಮಠದ ಸಿಬ್ಬಂದಿಗಳಾದ ಗವಿಸಿದ್ದಯ್ಯ ಸ್ವಾಮಿ. ಚಂದ್ರು ಗೌಡ ಸಂಸ್ಥಾಪಕರು ಆಶಾಕಿರಣ ಅನಾಥ ಮತ್ತು ಬಡ ಮಕ್ಕಳ ಶಾಲೆ ಸಿಂಧನೂರು. ಹಾಗೂ ಶಿಷ್ಯರುಗಳು ಉಪಸ್ಥಿತರಿದ್ದರು.

## ಫೆ.01ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಫೆ.01ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.**



ಅಂದು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರೊಂದಿಗೆ ವಿಶೇಷ ವಿಮಾನದ ಮೂಲಕ ಬೆಂಗಳೂರಿನಿಂದ ಹೊರಟು ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದಿಂದ ಆಯೋಜಿಸಿರುವ ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3.30ಕ್ಕೆ ತಿಂಥಣಿ ಬ್ರಿಜ್‌ನ ಶಾಖಾ ಮಠದಿಂದ ನಿರ್ಗಮಿಸಿ ಮುಖ್ಯಮಂತ್ರಿಗಳೊಂದಿಗೆ ಹೆಲಿಕಾಪ್ಟರ್ ಮೂಲಕ ಕಲಬುರಗಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.31ಕ್ಕೆ ಅಕ್ರಮ ಕಳ್ಳ ಸಾಗಾಣಿಕೆ ವಿರೋಧಿಸಿ ಮೌನ ಜಾಥಾ: ಶರಣಪ್ಪ ಬರ್ಶಿ.

ನೈಜ್ಯ ದೆಸೆ ನ್ಯೂಸ್

**ದಿ ಮೂಮೆಂಟ್ ಗ್ಲೋಬಲ್ ಫೌಂಡೇಶನ್ ಮುಂಬೈ ಸಾಧನ ರಾಯಚೂರು, ಅನಿಕೇತನ ಪದವಿಪೂರ್ವ ಕಾಲೇಜು ಮತ್ತು ಗ್ರಾಮ ಜ್ಯೋತಿ ಸೊಸೈಟಿ ಹಾಗೂ ಸಾಧನ ರಾಯಚೂರು, ಯೂ. ಆರ್.ಐ ಸಿಂಧನೂರು ಇವರ ಸಂಯುಕ್ತಾಶ್ರಯದಲ್ಲಿ ಜನವರಿ. 31ರಂದು ಮಹಿಳೆಯರ ಮತ್ತು ಬಾಲಕಿಂ–ತುರ ಅಕ್ರಮ ಕಳ್ಳ ಸಾಗಾಣಿಕೆಯನ್ನು ವಿರೋಧಿಸಿ, ಮೌನ ಜಾಥಾವನ್ನು ಹಮ್ಮಿಕೊಳ್ಳಲಾಗಿದೆಂದು ಸಾಧನಾ ರಾಯಚೂರು ಕಾರ್ಯದರ್ಶಿ ಶರಣಪ್ಪ ಬರ್ಶಿ ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ.**




ಈ ಜಾಥಾವನ್ನು ಬೆಂಬಲಿಸಲು ಸಾರ್ವಜನಿಕರಿಗೆ ಸಂಘ ಸಂಸ್ಥೆಗಳಿಗೆ ವಿನಂತಿಸಿಕೊಳ್ಳುತ್ತೇವೆ, ಸದರಿ ಈ ಕಾರ್ಯಕ್ರಮವು ಮೌನವಾಗಿದ್ದು, ಮಾನವ ಕಳ್ಳ ಸಾಗಾಣಿಕೆಯಲ್ಲಿ ಧ್ವನಿ ಇಲ್ಲದಂತೆ ಬದುಕುತ್ತಿರುವ ಬಲಿಪಶುಗಳೊಂದಿಗೆ ಏಕಾತ್ಮತೆಯನ್ನು ತೋರಿಸುವ ಉದ್ದೇಶವಾಗಿದೆ. ನಂತರ ಅನಿಕೇತನ ಕಾಲೇಜಿನಲ್ಲಿ



ಬಹಿರಂಗ ಸಭೆಯನ್ನು ನಡೆಸಲಾಗುವುದು. ಈ ಕಾರ್ಯಕ್ರಮದಲ್ಲಿ ಕನಕದಾಸ ಪದವಿ ಕಾಲೇಜಿನ ಪ್ರಾಚಾರ್ಯರಾದ ವೀಣಾಕ್ಷಿ ಮಾಡಸಿರವಾರ, ಅನಿಕೇತನ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ನಾಗರಾಜ ಮುಕ್ಕುಂದ, ಹಿರಿಯ ವರದಿಗಾರರಾದ ಡಿ.ಎಚ್.ಕಂಬಳಿ ಅಶೋಕ ಬೆನ್ನೂರು, ಗಂಗಾಧರ ವೀರಗಂಟಿ, ತುರ್ವಿಹಾಳ ಪಿಎಸ್‌ಐ ಸುಜಾತ, ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ ಎಂದರು.

## ಶ್ರೀ ಜಗದ್ಗುರು ಮೌನೇಶ್ವರ 40 ನೇ ವರ್ಷದ ವೈಭವದ ಜಾತ್ರಾ ಮಹೋತ್ಸವ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಉಮಳಿ ಹೊಸುರು ಗ್ರಾಮದಲ್ಲಿನ ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನದಲ್ಲಿ 40 ನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪುರವಂತರ ಸೇವೆ , ಪಲ್ಲಕ್ಕಿ ಉತ್ಸಾವ ನಡೆಯಿತು, ಗ್ರಾಮಸ್ಥರು ಕಾತ–ರಿಕಿ ಮೌನೇಶ್ವರ ಮಠದ ಶ್ರೀ ಅಯ್ಯಪ್ಪ ತಾತನವರ ಸಾನಿಧ್ಯದಲ್ಲಿ ಶ್ರೀ ಜಗದ್ಗುರು ಮೌನೇಶ್ವರ ಉಚ್ಚಾಯ ಮಹೋತ್ಸವವನ್ನು ವೈಭವದಿಂದ ಭಕ್ತಿ ಭಾವದಿಂದ ನೆರವೇರಿಸಿದರು.**

ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಗ್ರಾಮೀಣ ಭಾಗದ ರೈತರ ದೇಸಿ ಕ್ರೀಡೆಯಾದ ಗಿರ್ಕೀ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳಿಗೆ ಸುವರ್ಣಗಿರಿ ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಆಶೀರ್ವಾಚನ ನೀಡಿ ಇಂದಿನ ದಿನಗಳಲ್ಲಿ ರೈತರ ಅವಿಭಾಜ್ಯ ಅಂಗವೇಂದೆ ಪರಗಣಿಸಲಾಗುವ ಎತ್ತುಗಳೊಂದಿಗೆ ರೈತರು ಗೀರ್ಕಿ ಬಂಡಿ ಓಟದಲ್ಲಿ ಭಾಗವಹಿಸುವ ಮೂಲಕ ನಮ್ಮ ಅಪ್ಪಟ ಗ್ರಾಮೀಣ ಕ್ರೀಡೆಯನ್ನು ಮುಂದಿನ ಪಿಳಿಗೆಗೆ ಉಳಿಸಿ ಬೆಳೆಸುವ ಕಾರ್ಯವನ್ನು ಮಾಡುತ್ತಿದ್ದಾರೆ ಇಂತಹ ಗ್ರಾಮೀಣ ಕ್ರೀಡೆಗಳನ್ನು ಹೆಚ್ಚು ಹೆಚ್ಚು ನಡೆಸುವ ಮೂಲಕ ಅವುಗಳನ್ನು ಉಳಿಸಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಗೀರ್ಕಿ ಬಂಡಿ ಓಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ರೈತ ಅರುಣ್ ಕುಮಾರ್ ನವಲಕಲ್ ರವರ ಎತ್ತುಗಳು ಪ್ರಥಮ ಸ್ಥಾನ ಪಡೆದು 20 ಸಾವಿರ, ರೈತ ಹನುಮೇಶ ಬೆಟ್ಟದೂರು ರವರ ಎತ್ತುಗಳು ದ್ವಿತೀಯ ಸ್ಥಾನ ಪಡೆದು10 ಸಾವಿರ , ರೈತ ಹನುಮಯ್ಯ ನೀರಮಾನವಿ ರವರ ಎತ್ತುಗಳು ತೃತೀಯ ಸ್ಥಾನ ಪಡೆದು ಆರು ಸಾವಿರ, ಬಹುಮಾನ 6ಸಾವಿರ ರೂ. ರೈತ ದದ್ದಲ್ ಸಣ್ಣ ವಿರೇಶ್ ರವರ ಎತುಗಳು ನಾಲ್ಕನೇ ಸ್ಥಾನ ಪಡೆಯುವ ಮೂಲಕ 4 ಸಾವಿರ ನಗದು ಬಹುಮಾನಗಳನ್ನು ಪಡೆದುಕೊಂಡರು. ಬಹುಮಾನಗಳನ್ನು ಪಂಪಣ್ಣ ಮ್ಯಾಕ್ಕಲ್, ಶರಣಪ್ಪ ಗೌಡ ಮಾಲಿ ಪಾಟೀಲ್ , ಮಹೇಂದ್ರ ನಾಯಕ್ ಮ್ಯಾಕಲ್ ,ಶಶಿಕುಮಾರ್ ಹೀರೆಮಠ ವಿತರಿಸಿದರು.

ಗ್ರಾಮದ ಶ್ರೀ ಸಿದ್ದೇಶ್ವರ ದೇವಸ್ಥಾನದ ಜಮೀನಿನಲ್ಲಿ ನಡೆದ ಓಪನ್ ಮ್ಯಾಟ್ ಕಬ್ಬಡಿ ಪಂದ್ಯಾವಳಿಯಲ್ಲಿ ಬಾಗಲವಾಡ ತಂಡ ಪ್ರಥಮ. ಉಮಳಿಹೊಸುರು ತಂಡ ದ್ವೀತಿಯ, ಕೊರವಿ ತಂಡ ತೃತೀಯ ಸ್ಥಾನವನ್ನು ಪಡೆದುಕೊಂಡರು. ಕಬ್ಬಡಿ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಗಳಿಗೆ ಶರಣಪ್ಪ ಗೌಡ ಮಾಲಿ ಪಾಟೀಲ್ ,ಲಚ್ಚುಮಯ್ಯ ನಾಯಕ ಗೊಬ್ಬರಕಲ್,ಅಂಬಣ್ಣ ನಾಯಕ ಬೇನೂರು ಬಹುಮಾನಗಳನ್ನು ವಿತರಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಗೀರ್ಕಿ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳನ್ನು ವಿಕ್ಷೀಸುವುದಕ್ಕಾಗಿ ಉಮಳಿ ಹೋಸುರು ಸೇರಿದಂತೆ ಸುತ್ತಮುತ್ತಲಿನ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ರಾಯಚೂರು ಉತ್ಸವದ ಕರಪತ್ರಗಳನ್ನು ಮನೆಮನೆಗೆ ತಲುಪಿಸಿ ಪ್ರಚಾರ ನೀಡಲು ಡಿಹೆಚ್‌ಓ ಡಾ.ಸುರೇಂದ್ರ ಬಾಬು ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ನಡೆಸಬೇಕಿದೆ. ಈ ಕಾರ್ಯಕ್ರಮದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ದಿಶೆಯಲ್ಲಿ ಆರೋಗ್ಯ ಇಲಾಖೆಯ ಕ್ಷೇತ್ರ ಸಿಬ್ಬಂದಿಯು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಮನೆಮನೆಗೆ ತೆರಳಿ ಉತ್ಸವದ ಕರಪತ್ರ ನೀಡಿ ಮಾಹಿತಿ ನೀಡುವಂತೆ ಉತ್ಸವದ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಸಮನ್ವಯಾಧಿಕಾರಿ ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಹೇಳಿದರು.**



ಜನವರಿ 29ರ ಗುರುವಾರ ನಗರ ಡಿಹೆಚ್‌ಓ ಕಚೇರಿಯಲ್ಲಿ ಜಿಲ್ಲೆಯ ತಾಲೂಕು ಆರೋಗ್ಯಾಧಿಕಾ–ರಿಗಳು ಹಗೂ ವೈದ್ಯಾಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಐತಿಹಾಸಿಕ ನಾಡು ರಾಯಚೂರಿನಲ್ಲಿ ಬಹುದಿನಗಳ ನಂತರ ಜರುಗುತ್ತಿರುವ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮವು ಮೂರು ದಿನಗಳ ಕಾಲ ನಡೆಯಲಿದ್ದು, ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆಗೆ ಸೂಚನೆ ನೀಡಿದ್ದಾರೆ. ಜನರ ಉತ್ಸವವನ್ನು ಇಮ್ಮಡಿಗೊಳಿಸುವ ದಿಶೆಯಲ್ಲಿ ಹಮ್ಮಿಕೊಂಡ ಎಲ್ಲ ಕಾರ್ಯಕ್ರಮಗಳಲ್ಲಿ ಜನರು ತಪ್ಪದೇ ಭಾಗಿಯಾಗಬೇಕು.

ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸಲು ಸೂಚನೆ ನೀಡಿದರು. ಜನತೆಗೆ ಪ್ರೇರೇಪಣೆಗಾಗಿ ಈಗಾಗಲೇ ದೇಸಿ ಕ್ರೀಡೆ, ಮ್ಯಾರಾಥಾನ್, ಸೈಕ್ಲಿಂಗ್, ದೇಹದಾರ್ಢ್ಯ ಸ್ಪರ್ಧೆಗಳನ್ನು ಏರ್ಪಡಿಸಿ ಉತ್ಸವದ ಕಳೆ ಹೆಚ್ಚಿಸಲಾಗಿದೆ. ಅದರಂತೆ ಇನ್ನುಂದೆಯು ಸಹ ಬೇರೆ ಬೇರೆ ಕಾರ್ಯಕ್ರಮಗಳಿವೆ. ಮಕ್ಕಳ ಉತ್ಸವ, ಆಹಾರ ಮೇಳ, ಗ್ಯಾರಂಟಿ ಮೇಳ, ಹೆಲಿಕ್ಯಾಪ್ಟರ್ ಮೂಲಕ ರಾಯಚೂರು ಹಾಗೂ ಸುತ್ತಲಿನ ಸ್ಥಳ ವೀಕ್ಷಣೆ, ಹೆಸರಾಂತ ಕಲಾವಿದರು, ನೃತ್ಯಪಟುಗಳಿಂದ ಪ್ರತಿದಿನ ಕೃಷಿ ವಿಶ್ವವಿದ್ಯಾಲಯದ ಆವರಣ, ಜಿಲ್ಲಾ ರಂಗಮಂದಿರ, ಮಹಿಳಾ ಸಮಾಜದ ಗ್ರೌಂಡ್, ವಾಲ್ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತವೆ ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್.ಎನ್., ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಡಿಪಿಎಮ್ ನವೀನ್ ಕುಮಾರ್, ಹೆಚ್‌ಐಓ ಸುರೇಶ್, ನಾಗರಾಜ್, ಜ್ಯೋತಿ, ಭಾರತಿ ಸೇರಿದಂತೆ ಇತರರು ಇದ್ದರು. ಆರೋಗ್ಯ ಇಲಾಖೆಯಿಂದ ಕಾರ್ಯಕ್ರಮ: ಜಾಲಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಿಗೆ ರಾಯಚೂರು ಉತ್ಸವದ ಕುರಿತು ಮಾಹಿತಿ ನೀಡಲಾಯಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M.Sc. ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ

ಮಾಸ್ಟರ್ ಆಫ್ ಡೆಂಟಲ್ ಸರ್ಜರಿ (MDS) ಎಂಬುದು ಬಿಡಿಎಸ್ (BDS) ನಂತರದ ಮೂರು ವರ್ಷಗಳ ಸ್ನಾತಕೋತ್ತರ ಪದವಿಯಾಗಿದ್ದು,ಮಾಸ್ಟರ್ ಆಫ್ ಡೆಂಟಲ್ ಸರ್ಜರಿ (MDS) ದಂತವೈದ್ಯಶಾಸ್ತ್ರದಲ್ಲಿ ಮೂರು ವರ್ಷಗಳ ಸ್ನಾತಕೋತ್ತರ ಕಾರ್ಯಕ್ರಮವಾಗಿದ್ದು, ಇದು ದಂತ ಕ್ಷಯ ಮತ್ತು ಇತರ ಹಲ್ಲಿನ ಸಂಬಂಧಿತ ಸಮಸ್ಯೆಗಳ ರೋಗನಿರ್ಣಯ, ತಡೆಗಟ್ಟುವಿಕೆ ಮತ್ತು ಚಿಕಿತ್ಸೆಯ ಮೇಲೆ ಕೇಂದ್ರೀಕರಿಸುತ್ತದೆ. ರೋಗಿಗಳಿಗೆ ಸುಧಾರಿತ ದಂತ ಆರೈಕೆಯನ್ನು ಒದಗಿಸಲು ಅಗತ್ಯವಿರುವ ಜ್ಞಾನ, ಕೌಶಲ್ಯ ಮತ್ತು ಪ್ರಾಯೋಗಿಕ ಅನುಭವದೊಂದಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲು ಈ ಕಾರ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದೆ. ಸಂಪ್ರದಾಯವಾದಿ ದಂತಚಿಕಿತ್ಸೆಯು ನೈಸರ್ಗಿಕ ಹಲ್ಲುಗಳ ಸಂರಕ್ಷಣೆಯನ್ನು ಒಳಗೊಂಡಿರುತ್ತದೆ, ಉದಾಹರಣೆಗೆ ಫಿಲ್ಲಿಂಗ್‌ಗಳು, ಇನ್ಲೇಗಳು, ಆನ್ಲೇಗಳು ಮತ್ತು ವೆನೀರ್‌ಗಳು. ಮತ್ತೊಂದೆಡೆ, ಎಂಡೋಡಾಂಟಿಕ್ಸ್ ಎಂದರೆ ಹಲ್ಲಿನ ತಿರುಳು ಮತ್ತು ಹಲ್ಲಿನ ಬೇರಿನ ಸುತ್ತಲಿನ ಅಂಗಾಂಶಗಳ ಅಧ್ಯಯನ ಮತ್ತು ಚಿಕಿತ್ಸೆ. ಇದು ಹಲ್ಲಿನ ಸೋಂಕುಗಳ ರೋಗನಿರ್ಣಯ ಮತ್ತು ಚಿಕಿತ್ಸೆ, ರೂಟ್ ಕೆನಾಲ್ ಚಿಕಿತ್ಸೆ ಮತ್ತು ಹಾನಿಗೊಳಗಾದ ಅಥವಾ ರೋಗಪೀಡಿತ ಹಲ್ಲುಗಳಿಗೆ ಚಿಕಿತ್ಸೆ ನೀಡುವ ಇತರ ವಿಧಾನಗಳನ್ನು ಒಳಗೊಂಡಿದೆ. ವಿದ್ಯಾರ್ಥಿಗಳು ವಿವಿಧ ದಂತ ಪರಿಸ್ಥಿತಿಗಳ ರೋಗನಿರ್ಣಯ ಮತ್ತು ಚಿಕಿತ್ಸೆಯಲ್ಲಿ ವ್ಯಾಪಕ ಅನುಭವವನ್ನು ಪಡೆಯುತ್ತಾರೆ, ಜೊತೆಗೆ ದಂತ ವಿಧಾನಗಳಲ್ಲಿ ಸುಧಾರಿತ ಉಪಕರಣಗಳು ಮತ್ತು ತಂತ್ರಜ್ಞಾನಗಳ ಬಳಕೆಯಲ್ಲಿಯೂ ಸಹ ಕಲಿಯುತ್ತಾರೆ. ದಂತ ಸಾಮಗ್ರಿಗಳು ಮತ್ತು ತಂತ್ರಗಳಲ್ಲಿನ ಇತ್ತೀಚಿನ ಬೆಳವಣಿಗೆಗಳು ಮತ್ತು ರೋಗಿಗಳಿಗೆ ಉತ್ತಮ ಗುಣಮಟ್ಟದ ದಂತ ಆರೈಕೆಯನ್ನು ಒದಗಿಸಲು ಇವುಗಳನ್ನು ಹೇಗೆ ಅನ್ವಯಿಸಬೇಕು ಎಂಬುದರ ಕುರಿತು ಅವರು ಕಲಿಯುತ್ತಾರೆ.ಕನ್ಸರ್ವೇಟಿವ್ ಡೆಂಟಿಸ್ಟ್ರಿ ಮತ್ತು ಎಂಡೋಡಾಂಟಿಕ್ಸ್‌ನಲ್ಲಿ ಒಆಖ ಕಾರ್ಯಕ್ರಮದ ಪದವೀಧರರು ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ವ್ಯಾಪಕ ಶ್ರೇಣಿಯ ವೃತ್ತಿ ಅವಕಾಶಗಳನ್ನು ಹೊಂದಿದ್ದಾರೆ. ಅವರು ದಂತ ಚಿಕಿತ್ಸಾಲಯಗಳು ಮತ್ತು ಆಸ್ಪತ್ರೆಗಳಲ್ಲಿ ಸಲಹೆಗಾರರಾಗಿ ಕೆಲಸ ಮಾಡಬಹುದು, ಅಥವಾ ಅವರು ತಮ್ಮದೇ ಆದ ಖಾಸಗಿ ಅಭ್ಯಾಸಗಳನ್ನು ಪ್ರಾರಂಭಿಸಬಹುದು. ಅವರು ಸಂಶೋಧನೆ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ವೃತ್ತಿಜೀವನವನ್ನು ಮುಂದುವರಿಸಬಹುದು, ಅಥವಾ ಅವರು ದಂತ ಶಿಕ್ಷಕರಾಗಿ ಕೆಲಸ ಮಾಡಬಹುದು. ದಂತವೈದ್ಯಶಾಸ್ತ್ರದ ವಿವಿಧ ಶಾಖೆಗಳಲ್ಲಿ ವಿಶೇಷ ತರಬೇತಿಯನ್ನು ಒದಗಿಸುತ್ತದೆ. ಈ ಕೋರ್ಸ್ ಓರಲ್ ಸರ್ಜರಿ, ಎಂಡೋಡಾಂಟಿಕ್ಸ್, ಆರ್ಥೋಡಾಂಟಿಕ್ಸ್‌ನಂತಹ ಕ್ಷೇತ್ರಗಳಲ್ಲಿ ಆಳವಾದ ಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ನೀಡುತ್ತದೆ. MDS ಕೋರ್ಸ್ ಪ್ರಮುಖ ವಿವರಗಳು: ಅವಧಿ: 3 ವರ್ಷಗಳು (ಪೂರ್ಣ ಸಮಯ). ಅರ್ಹತೆ: ಮಾನ್ಯತೆ ಪಡೆದ ದಂತ ಕಾಲೇಜಿನಿಂದ ಃಆಖ ಪದವಿ ಮತ್ತು ಪ್ರವೇಶ ಪರೀಕ್ಷೆ (NEET MDS) ಉತ್ತೀರ್ಣರಾಗಿರಬೇಕು. ವಿಶೇಷತೆಗಳು (Specializations): ಓರಲ್ ಮತ್ತು ಮ್ಯಾಕ್ಸಿಲೊಫೇಶಿಯಲ್ ಸರ್ಜರಿ ಕನ್ಸರ್ವೇಟಿವ್ ಡೆಂಟಿಸ್ಟ್ರಿ ಮತ್ತು ಎಂಡೋಡಾಂಟಿಕ್ಸ್ ಪೀಡೋಡಾಂಟಿಯಾ (ಮಕ್ಕಳ ದಂತ ಚಿಕಿತ್ಸೆ) ಆರ್ಥೋಡಾಂಟಿಕ್ಸ್ ಮತ್ತು ಡೆಂಟೋಫೇಶಿಯಲ್ ಆರ್ಥೋಪೆಡಿಕ್ಸ್ ಪಿರಿಯೊಡಾಂಟಾಲಜಿ (ಹಲ್ಲುಗಳ ಸುತ್ತಲಿನ ಅಂಗಾಂಶಗಳ ಚಿಕಿತ್ಸೆ) ಓರಲ್ ಪ್ಯಾಥಾಲಜಿ ಮತ್ತು ಮೈಕ್ರೋಬಯಾಲಜಿ ವೃತ್ತಿಜೀವನ: ದಂತ ಆಸ್ಪತ್ರೆಗಳು, ಖಾಸಗಿ ಕ್ಲಿನಿಕ್‌ಗಳು, ಬೋಧನಾ ಸಂಸ್ಥೆಗಳು, ಮತ್ತು ಸಂಶೋಧನಾ ಕೇಂದ್ರಗಳಲ್ಲಿ ಉದ್ಯೋಗಾವಕಾಶಗಳಿವೆ.

# ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಖಡಕ್ ಸೂಚನೆ

**ರಾಯಚೂರು: ದೇವದುರ್ಗ, ಸಿರವಾರ, ಮಾನವಿ, ಸಿಂಧನೂರ ಮತ್ತು ಲಿಂಗಸೂರ ತಾಲೂಕು ಸೇರಿದಂತೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಅನಧೀಕೃತವಾಗಿ ಮರಳು ಸಾಗಣೆ ಕೂಡಲೇ ನಿಲ್ಲಬೇಕು. ಯಾವುದೇ ಕಡೆಗಳಲ್ಲಿ ರಾಜಾರೋಷವಾಗಿ ಮರಳು ಎತ್ತುವುದು ಕಂಡು ಬಂದಲ್ಲಿ ಅದನ್ನು ಸಹಿಸಲಾಗುವುದಿಲ್ಲ.**

ಅವರು ಎಷ್ಟೇ ಪ್ರಭಾವಿಗಳಾಗಿರಲಿ, ಯಾರೇ ಇರಲಿ ಅಂತವರ ಮೇಲೆ ಮುಲಾಜಿಲ್ಲದೇ ಕ್ರಮ ಜರುಗಿಸಲು ಹಿಂದೆ ಮುಂದೆ ನೋಡುವುದಿಲ್ಲ ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಡಕ್ ಎಚ್ಚರಿಕೆ ನೀಡಿದರು. ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 30ರಂದು ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆಯ ದೇವದುರ್ಗ,

ಮಾನವಿ ಸೇರಿದಂತೆ ಇನ್ನಿತರ ಕಡೆ ಅನಧೀಕೃತ ಮರಳು ಸಾಗಣೆ ಅವ್ಯಾಹತ ನಡೆಯುತ್ತಿದ್ದು, ಇದಕ್ಕೆ ಬ್ರೇಕ್ ಹಾಕಲು ಅಧಿಕಾರಿಗಳು ಕ್ರಮ ವಹಿಸಬೇಕು ಎನ್ನುವ ವಿಷಯವು ಕೆಡಿಪಿ ಸಭೆ ಮತ್ತು ಇನ್ನಿತರ ಸಭೆಗಳಲ್ಲಿ ಮತ್ತೆ ಮತ್ತೆ ಚರ್ಚೆಗೆ ಬರುತ್ತಿದೆ. ಈ ವಿಷಯವನ್ನು ಜಿಲ್ಲಾಡಳಿತವು ಗಂಭೀರವಾಗಿ ಪರಿಗಣಿಸಿದೆ. ಈ ಲ್ಯಾಂಡ್ ಮಾಫಿಯಾದಲ್ಲಿ ಯಾವುದೇ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಕೂಡದು. ಈ ಅಕ್ರಮ ಮರಳು ದಂಧೆಯಲ್ಲಿ ಭಾಗಿಯಾಗಿ, ಅಧಿಕಾರಿಗಳು ಮತ್ತು ಸಿಬ್ಬಂದಿಯು ನೋಡಿಯೂ ನೋಡದಂತೆ ಇದ್ದರೆ, ಅಕ್ರಮ ಮರಳು ದಂಧೆಗೆ ಕುಮ್ಮಕ್ಕು ನೀಡಿದರೆ ಸಹಾಯಕ ಆಯುಕ್ತರು, ಪೊಲೀಸ್ ಉಪಾಧೀಕ್ಷಕರು, ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ-



ರಿಗಳು, ಪಿಡಿಓ ಯಾರೇ ಇರಲಿ ಅಂತಹ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಮಾನತುಗೊಳಿಸಲು ಕೂಡಲೇ ಶಿಪಾರಸ್ಸು ಮಾಡಲಾಗುವುದು. ಪ್ರಕರಣವು ಗಂಭೀರವಾಗಿದ್ದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆಯೇ ಎಫ್‌ಐಆರ್ ದಾಖಲಿಸಿ ಶಾಶ್ವತವಾಗಿ ಮನೆಗೆ ಕಳುಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ವಿಶೇಷ ಕಾರ್ಯಾಚರಣೆಗೆ ಸೂಚನೆ: ಅಕ್ರಮ ಮರಳು ಸಾಗಣೆಗೆ ಬ್ರೇಕ್ ಹಾಕಬೇಕು ಎಂಬುದು ದೇವದುರ್ಗ ಸಿಟಿ ಜನರು ಹಾಗೂ ಆ ತಾಲೂಕಿನ 48 ಹಳ್ಳಿಗಳ ಒಕ್ಕೋರಲಿನ ಮನವಿ ಮತ್ತು ಒತ್ತಾಯವಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ದೇವದುರ್ಗ ತಾಲೂಕಿನಲ್ಲಿ ವಾರಗಳ ಕಾಲ ವಿಶೇಷ ಕಾರ್ಯಾಚರಣೆಗಿಳಿಯಬೇಕು. ದೇವದುರ್ಗ ಮತ್ತು ಮಾನವಿಯಲ್ಲಿ ಆರ್‌ಟಿಓ ಅಧಿಕಾರಿಗಳು ವಿಶೇಷ ಡ್ರೈವ್ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಪೊಲೀಸ್ ರಕ್ಷಣೆಗೆ ಪಡೆದುಕೊಳ್ಳಿ: ನೇಮ್ ಪ್ಲೇಟ್ ಇಲ್ಲದೇ ಮಣ್ಣು ತುಂಬಿಕೊಂಡು ಓಡಾಡುವ ಟಿಪ್ಪರ್, ಟ್ರಾಕ್ಟರ್‌ಗಳ ಮೇಲೆ ಕಣ್ಣಿಟ್ಟು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ದಾಳಿ ನಡೆಸಿ ಅಂತಹ ವಾಹನಗಳನ್ನು ಸೀಜ್ ಮಾಡಬೇಕು. ಹೇವಿ ಪೆನಾಲ್ಟಿ ಹಾಕಿ ಬಿಸಿ ಮುಟ್ಟಿಸಬೇಕು, ಸೀಜ್ ಮಾಡಿ ಸುಮ್ಮನೆ ಬಿಡಬಾರದು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಚೆಕ್‌ಪೋಸ್ಟ್ ಸ್ಥಾಪನೆಗೆ ಸೂಚನೆ: ಜಾಲಹಳ್ಳಿ, ಗಬ್ಬೂರ ಸೇರಿದಂತೆ ದೇವದುರ್ಗ, ಸಿರವಾರ, ಲಿಂಗಸೂರು, ಮಾನವಿ, ಸಿಂಧನೂರ ತಾಲೂಕಿನ ವಿವಿಧೆಡೆ ಕೂಡಲೇ ಚೆಕ್‌ಪೋಸ್ಟ್ ಸ್ಥಾಪನೆಗೆ ಕ್ರಮವಹಿಸಿ ಅಕ್ರಮ ಮರಳು ಸಾಗಣೆ ತಡೆಯಬೇಕು.

ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಸೇರಿ ಒಟ್ಟು ಮೂರು ತಂಡಗಳಾಗಿ ಚೆಕ್‌ಪೋಸ್ಟನಲ್ಲಿ ನಿಗಾ ಇಡಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಯಿಂದಲೇ ಯಾವುದೇ ಮೇಸೇಜ್ ಪಾಸಾಗದಂತೆ ಜಾಗರೂಕರೆವಹಿಸಿ ಬೇರೆ ಬೇರೆ ಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಚೆಕ್‌ಪೋಸ್ಟಗಳಿಗೆ ನಿಯೋಜನೆ ಮಾಡಬೇಕು. ಬೇರೆ ಬೇರೆ ಇಲಾಖೆಗಳಲ್ಲಿನ ಎಫ್‌ಡಿಎ, ಎಸ್‌ಡಿಎ ಸೇರಿದಂತೆ ಇನ್ನೀತರ ಸಿಬ್ಬಂದಿಯನ್ನು ಕಾರ್ಯಾಚರಣೆ ನಡೆಸುವ ಸಮಿತಿಗೆ ಸೇರಿಸಿಕೊಂಡು ಅವರಿಗೆ ಜವಾಬ್ದಾರಿ ಹಂಚಿಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಿಸಿ ಟಿವಿ ಅಳವಡಿಕೆಗೆ ಸೂಚನೆ: ಬೇರೆ ಬೇರೆ ಕಡೆಗಳಲ್ಲಿ ಸಿಸಿ ಟಿವಿ ಅಳವಡಿಸಿ ಅವರು ಕಾರ್ಯ ನಿರ್ವಹಿಸುವಂತೆ ನೋಡಿ ನಿಗಾ ವಹಿಸಬೇಕು. ಸಿಟಿ ಟಿವಿ ರೆಕಾರ್ಡ್ ಇಟ್ಟುಕೊಳ್ಳಬೇಕು. ಸಿಸಿಟಿವಿ ಅಳವಡಿಸಿಲ್ಲ ಎಂದು ಯಾವುದೇ ಕಾರಣಕ್ಕೂ ಸಬೂಬು ಹೇಳುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸೀಜ್ ಮಾಡಿದ ಸ್ಯಾಂಡ್ ವಿಲೆಗೆ ಸೂಚನೆ: ಜಿಲ್ಲೆಯಲ್ಲಿ ಕೆಕೆಆರ್‌ಡಿಬಿಯಿಂದ ವಿವಿಧ ಕಾಮಗಾರಿಗಳು ನಡೆಯುತ್ತಿವೆ. ಜಲಧಾರೆಯ ದೊಡ್ಡ ಪ್ರೊಜೆಕ್ಟ್ ಅನುಷ್ಠಾನವಾಗುತ್ತಿದೆ. ನಿರ್ಮಿತಿ ಕೇಂದ್ರದಿಂದಲೂ ಕೆಲವು ಕಾಮಗಾರಿಗಳು ಚಾಲ್ತಿಯಲ್ಲಿವೆ. ಇಂತಹ ಕಾಮಗಾರಿಗಳಿಗೆ ಮಣ್ಣು ಬೇಕಾಗುತ್ತದೆ. ಇದುವರೆಗೆ ಜಪ್ತಿ ಮಾಡಿದ ಮಣ್ಣಿಗೆ ನಿಯಮಾನುಸಾರ ಇ ಹರಾಜು ಪ್ರಕ್ರಿಯೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಆಯುಕ್ತರು, ತಹಸೀಲ್ದಾರಗೆ ಸೂಚನೆ: ಸಹಾಯಕ ಆಯುಕ್ತರು ಮತ್ತು ತಹಸೀಲ್ದಾರರು ಅಕ್ರಮ ಮರಳು ಸಾಗಣೆ ಪ್ರಕರಣಗಳ ಬಗ್ಗೆ ವಿಶೇಷ ನಿಗಾವಹಿಸಬೇಕು. ತಮ್ಮ ಹಂತದಲ್ಲಿ ತಂಡಗಳನ್ನು ರಚಿಸಿಕೊಂಡು ಆಯಾ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯಾವ ಕಡೆಗೆ ಎಷ್ಟು ದಾಳಿ ಮಾಡಿದ್ದೀರಿ ಎಂಬುದರ ಬಗ್ಗೆ ಟಾರ್ಗೆಟ್ ನೀಡಬೇಕು. ತಮ್ಮ ಹಂತದಲ್ಲಿ ದಾಳಿ ನಡೆಸಿ ಜೆಸಿಬಿ, ಟಿಪ್ಪರ್, ಟ್ರಾಕ್ಟರ್ ಸೀಜ್ ಮಾಡಿ ಬಿಸಿಮುಟ್ಟಿಸಬೇಕು ಎಂದು ಸೂಚನೆ ನೀಡಿದರು. ಆರ್‌ಟಿಓ ಅಧಿಕಾರಿಗಳಿಗೆ ಸೂಚನೆ: ತಂಡವಾಗಿ ಕೆಲಸ ಮಾಡಿ: ಪೊಲೀಸ್ ಸೇರಿದಂತೆ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಂಡವಾಗಿ ಕೆಲಸ ಮಾಡಬೇಕು. ರಾತ್ರಿ 9 ಗಂಟೆಯಿಂದ ಬೆಳಗಿನ 7 ಗಂಟೆವರೆಗಿನ ಅವಧಿಯಲ್ಲಿ ವಿಶೇಷ ನಿಗಾವಹಿಸಬೇಕು. ಒಂದೇ ವಾಹನಕ್ಕೆ ಅನುಮತಿ ಪಡೆದು ಒಂದೇ ನೇಮ್ ಪ್ಲೇಟ್ ಮೇಲೆ ನಾಲ್ಕಾರು ಗಾಡಿ ಓಡಿಸುವ ಜಾಲದ ಬಗ್ಗೆ ಗಮನ ಹರಿಸಬೇಕು ಎಂದು ಇದೆ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ದೂರುಗಳ ದಾಖಲಿಸಿ: ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ ಅವರು ಮಾತನಾಡಿ, ಉಪಖನಿಜ ಸಾಗಣೆ ವಾಹನಗಳಿಗೆ ಜಿಪಿಎಸ್ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಜಿಲ್ಲೆಯಲ್ಲಿ ಹಲವಾರು ವಾಹನಗಳಿಗೆ ಪರವಾನಿಗೆ ಇಲ್ಲದೇ, ನಂಬರ್ ಪ್ಲೇಟ್ ಇಲ್ಲದೇ ಹಾಗೂ ಜಿಪಿಎಸ್ ನೋಂದಣಿ ಇಲ್ಲದೇ ಅನಧೀಕೃತವಾಗಿ ಉಪ ಖನಿಜ ಸಾಗಣೆ ಮಾಡುವ ಬಗ್ಗೆ ದೂರುಗಳನ್ನು ದಾಖಲಿಸಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಡಾ.ಹಂಪಣ್ಣ ಸಜ್ಜನ, ದೇವದುರ್ಗ, ಲಿಂಗಸೂರು, ಅರಕೇರಾ, ಸಿರವಾರ, ಮಸ್ಕಿ, ಸಿಂಧನೂರ ಮತ್ತು ಮಾನ್ವಿ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಾದ ಮುತ್ತಣ್ಣ ಅವರು ಸಭೆಗೆ ಇಲಾಖೆಯ ಗುರಿ ಸಾಧನೆಗಳ ಬಗ್ಗೆ ಮಾಹಿತಿ ನೀಡಿದರು.

# ಬಿಡಾಡಿ ದನಗಳ ಹಾವಳಿಗೆ ಬೇಸತ್ತು ರೈತರಿಂದ ತಹಸೀಲ್ದಾರ್ ಮನವಿ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಬಿಡಾಡಿ ದನಗಳು ರೈತರ ಹೊಲಗಳಿಗೆ ನುಗ್ಗಿ ಬೆಳೆಗಳನ್ನು ನಾಶ ಮಾಡುತ್ತಿರುವದರಿಂದ ಬೇಸತ್ತ ರೈತರು ಬಿಡಾಡಿ ದನಗಳನ್ನು ಗೋ-ಶಾಲೆಗಳಲ್ಲಿ ಬಿಡಬೇಕೆಂದು ತಹಸೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ರೈತ ಹಿತರಕ್ಷಣಾ ಹೋರಾಟ ಸಮಿತಿಯಿಂದ ಶುಕ್ರವಾರ ಮನವಿ ಪತ್ರಸಲ್ಲಿಸುವ ಮೂಲಕ ಆಗ್ರಹಿಸಿದರು.**

ನಂತರ ಹೋರಾಟ ಸಮಿತಿಯ ಮುಖಂಡ ನಾಗರಡ್ಡೆಪ್ಪ ಬುದ್ದಿನ್ನಿ ಮಾತನಾಡಿ ತಾಲೂಕಿನ ಬುದ್ದಿನ್ನಿ ಎಸ್, ಸಾನಬಾಳ, ಹೂವಿನಭಾವಿ, ಮುದಬಾಳ, ಅಂಕುಶದೊಡ್ಡಿ, ಕಾಟಗಲ್, ವೆಂಕಟಾಪುರ ಮತ್ತು ಮಸ್ಕಿ ಸೀಮಾ ವ್ಯಾಪ್ತಿಯ ಹತ್ತಾರು ಹಳ್ಳಿಗಳ ರೈತರ ಹೊಲಗಳಿಗೆ




ನೂರಾರು ಬಿಡಾಡಿ ದನಗಳು ಹಿಂಡು ಹಿಂಡಾಗಿ ನುಗ್ಗಿ, ಬೆಳೆಯನ್ನು ತಿಂದು ಹಾಕುತ್ತಿರುವುದಲ್ಲದೇ, ತುಳಿದು ಬೆಳೆ ನಾಶ ಮಾಡುವುದರ ಜತೆಗೆ ಕೃಷಿ ಚಟುವಟಿಕೆಯಲ್ಲಿ ತೊಡಗಿದ ರೈತರ ಮೇಲೂ ದಾಳಿ ಮಾಡುತ್ತಿವೆ. ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹೊಲಗಳಿಗೆ ಹೋಗಲು ರೈತರು, ಮಹಿಳೆಯರು, ಕೃಷಿ ಕೂಲಿ ಕಾರ್ಮಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದರಿಂದ 15 ದಿನಗಳ ಒಳಗಾಗಿ ಈ ಬೀಡಾಡಿ ದನಗಳನ್ನು ಸ್ಥಳಾಂತರಿಸಬೇಕು.

ಇಲ್ಲದೇ ಹೋದಲ್ಲಿ ಮಸ್ಕಿ ತಹಸಿಲ್ ಕಚೇರಿಯ ಮುಂದೆ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾತ್ತದೆ ಎಂದರು. ಈ ಸಂದರ್ಭದಲ್ಲಿ ಬಸವರಾಜ ಇಳಿಗೇರ, ರಮೇಶ ಮೆದಿಕಿನಾಳ, ಯಮನಪ್ಪ ಮುದಬಾಳ,-ಅಂಬಪ್ಪ ದೇವರಮನಿ, ಗದ್ದೆಪ್ಪ ಮಾರಲದಿನ್ನಿ ಸೇರಿದಂತೆ ಬುದ್ದಿನ್ನಿ ಎಸ್, ಸಾನಬಾಳ, ಹೂವಿನಭಾವಿ, ಮುದಬಾಳ, ಅಂಕುಶದೊಡ್ಡಿ, ಕಾಟಗಲ್, ವೆಂಕಟಾಪುರ ಮತ್ತು ಮಸ್ಕಿ ಸೀಮಾ ವ್ಯಾಪ್ತಿಯ ಹತ್ತಾರು ಹಳ್ಳಿಗಳ ರೈತರಿದ್ದರು.

# ಮುದ್ದೇಬಿಹಾಳ ತಾಲೂಕು ಆಸ್ಪತ್ರೆಯಲ್ಲಿ ನರ್ಸಿಂಗ್ ಸಿಬ್ಬಂದಿಯ ಏಕತೆಯ ಸಂಕೇತವಾಗಿ ನೂತನ ವರ್ಷದ ಕ್ಯಾಲೆಂಡರ್ ಉದ್ಘಾಟನೆ



❑ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಕರ್ನಾಟಕ ರಾಜ್ಯ ಸರ್ಕಾರಿ ಶುಶ್ರೂಷಾಧಿಕಾರಿಗಳ ಕೇಂದ್ರ ಸಂಘ ಬೆಂಗಳೂರು (ರಿ) ತಾಲೂಕು ಘಟಕ ಮುದ್ದೇಬಿಹಾಳ ವತಿಯಿಂದ ನೂತನ ವರ್ಷದ ಕ್ಯಾಲೆಂಡರ್ ಉದ್ಘಾಟನಾ ಸಮಾರಂಭವನ್ನು ನಗರದ ತಾಲೂಕು ಆಸ್ಪತ್ರೆಯಲ್ಲಿ ವಿಜೃಂಭಣೆಯಿಂದ ಆಯೋಜಿಸಲಾಯಿತು.**

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಪರಶುರಾಮ ವಡ್ಡರ ವಹಿಸಿ ಮಾತನಾಡಿ, ಇಲ್ಲಿನ ಸಿಬ್ಬಂದಿಯ ಸೇವಾ ಮನೋಭಾವ ಮತ್ತು ಶಿಸ್ತುಪೂರ್ಣ ಕಾರ್ಯವೈಖರಿಯನ್ನು ಶ್ಲಾಘಿಸಿದರು. ಸಿಬ್ಬಂದಿಯ ಕಾರ್ಯವನ್ನು ಮರೆಯಲು ಸಾಧ್ಯವಿಲ್ಲ. ಎಲ್ಲರೂ ಅತ್ಯಂತ ನಿಷ್ಠೆಯಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೆಮ್ಮೆಯಾಗಿ ಹೇಳಿದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ನಿಕಟ ಪೂರ್ವ ಆಡಳಿತ ವೈದ್ಯಾಧಿಕಾರಿ ಡಾ. ಅನಿಲ್‌ಕುಮಾರ ಸೇಗುಣಿಸಿ ಮಾತನಾಡಿ, ಇಂತಹ ಒಗ್ಗಟ್ಟು ಕರ್ನಾಟಕ ರಾಜ್ಯದಲ್ಲೇ ಅಪರೂಪ. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ಸಿಬ್ಬಂದಿಯು ಅತ್ಯುತ್ತಮ ಸೇವೆ ಸಲ್ಲಿಸಿರುವುದು ಶ್ಲಾಘನೀಯ. ಮುದ್ದೇಬಿಹಾಳ ಸಂಘದ ಮಾದರಿಯನ್ನು ಅನುಸರಿಸಿ ಎಚ್.ಡಿ. ಕೋಟೆಯಲ್ಲಿಯೂ ಈ ವರ್ಷ ಕ್ಯಾಲೆಂಡರ್ ಬಿಡುಗಡೆ ಮಾಡಿರುವುದು ಸಂತಸದ ಸಂಗತಿ ಎಂದರು.

ಸ್ತ್ರೀರೋಗ ತಜ್ಞೆ ಡಾ. ಅನುಪಮಾ ಶೆಟ್ಟಿ ಹಾಗೂ ಹಿರಿಯ ಶುಶ್ರೂಷಾಧಿಕಾರಿ ಸಂಜೆ ಬೋಸ್ಲೆ ಮಾತನಾಡಿ, ವರ್ಷದಲ್ಲಿ 365 ದಿನಗಳೂ ನರ್ಸಿಂಗ್ ಸಿಬ್ಬಂದಿ ಸೇವೆಯಲ್ಲಿ ತೊಡಗಿಸಿಕೊಂಡಿರುತ್ತಾರೆ ಎಂಬ ಸಂದೇಶವನ್ನು ಸಮಾಜಕ್ಕೆ ತಲುಪಿಸುವ ಉದ್ದೇಶದಿಂದ ಕಳೆದ ಆರು ವರ್ಷಗಳಿಂದ ನಿರಂತರವಾಗಿ ಕ್ಯಾಲೆಂಡರ್ ಮುದ್ರಿಸಲಾಗುತ್ತಿದೆ ಎಂದು ಹೇಳಿದರು. ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ನಿರ್ದೇಶಕ ಶ್ರೀ ಆನಂದಗೌಡ ಬಿರಾದಾರ ಮಾತನಾಡಿ, ನರ್ಸಿಂಗ್ ಅಧಿಕಾರಿಗಳ ಸೇವೆ ಆರೋಗ್ಯ ಇಲಾಖೆಯ ಕಂಬದಂತಿದೆ. ದಿನದ 24 ಗಂಟೆಗಳೂ ಸೇವೆ ಸಲ್ಲಿಸುವ ಸಿಬ್ಬಂದಿಯ ಕಾರ್ಯ ಶ್ಲಾಘನೀಯ. ಸರ್ಕಾರಿ ನೌಕರರು ತಮ್ಮ ಆರೋಗ್ಯದ ಮೇಲೂ ಗಮನಹರಿಸಬೇಕಾದ ಅಗತ್ಯವಿದ್ದು, ಸಂಘದ ವತಿಯಿಂದ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸುವಂತೆ ಸಲಹೆ ನೀಡಿದರು.

ಶ್ರೀಮತಿ ಅಯ್ಯಮ್ಮ ಕೊಣ್ಣೂರ, ಶ್ರೀಮತಿ ಶಾಂತ ಮೇಟಿ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ನಿರ್ದೇಶಕ ಶ್ರೀ ವಿಟ್ಟಲ ಕಿಲಾರಟ್ಟಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ಒಗ್ಗಟ್ಟಿನಿಂದ ಮಾತ್ರ ಸಾಧ್ಯ. ಸಂಘದ ಏಕತೆಯೇ ಈ ಸಾಧನೆಗೆ ಕಾರಣ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಹಿಂದಿನ ಹಾಗೂ ಪ್ರಸ್ತುತ ಆಡಳಿತ ವೈದ್ಯಾಧಿಕಾರಿಗಳನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು. ನಯನ ಭಾರ್ಗವ ಪತ್ರಿಕೆಯ ಪುರಸ್ಕೃತರಿಗೆ ಗೌರವ ಪ್ರದಾನ ಮಾಡಲಾಯಿತು. ಸಂಘದ ಅಧ್ಯಕ್ಷ ಶ್ರೀ ಶಿವಣ್ಣ ಎಸ್. ಮಾಗಿ ಕಾರ್ಯಕ್ರಮ ನಿರೂಪಿಸಿದರು.

ಹಿರಿಯ ಸಲಹೆಗಾರ ಶ್ರೀ ಕಾಶಿನಾಥ ವಗದುರ್ಗಿ ವಂದನಾರ್ಪಣೆ ಸಲ್ಲಿಸಿದರು. ಪ್ರಧಾನ ಕಾರ್ಯದರ್ಶಿ ಶ್ರೀ ಮಹಮ್ಮದರಫೀಕ್ ಬಾಗವಾನ ಸ್ವಾಗತಿಸಿದರು. ಕಾರ್ಯಧ್ಯಕ್ಷ ಶ್ರೀ ಸಂತೋಷ ಅಂಗಡಿಗೇರಿ ಸನ್ಮಾನ ಕಾರ್ಯಕ್ರಮ ನಿರ್ವಹಿಸಿದರು. ಪ್ರಾಸ್ತಾವಿಕ ನುಡಿಯಲ್ಲಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸಚಿನ್ ರಾಥೋಡ ಮಾತನಾಡಿ, ರಾಜ್ಯದಲ್ಲೇ ಮೊದಲ ಬಾರಿಗೆ ಸಂಘವು ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾದರಿಯಾಗಿದ್ದು, ನಿರಂತರ ಆರು ವರ್ಷಗಳಿಂದ ಈ ಕಾರ್ಯ ಕೈಗೊಳ್ಳುತ್ತಿರುವುದು ಹೆಮ್ಮೆಯ ವಿಷಯ ಎಂದರು. ಬಿಜಾಪುರ ಹಾಗೂ ಬಾಗಲಕೋಟ್ ಆರೋಗ್ಯ ಸಂಘಗಳ ಗಣರಾಜ್ಯೋತ್ಸವ ಧ್ವಜಾರೋಹಣವನ್ನು ನರ್ಸಿಂಗ್ ಅಧಿಕಾರಿ ಸಂತೋಷ ಅಂಗಡಿಗೇರಿ ನೆರವೇರಿಸಿರುವುದು ಗೌರವದ ಸಂಗತಿ ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀ ಯಲಗುರೇಶ ತೊನಶಾಳ ಮಾತನಾಡಿ, ಇಂತಹ ಕಾರ್ಯಕ್ರಮಗಳು ಇನ್ನಷ್ಟು ಸಂಖ್ಯೆಯಲ್ಲಿ ಆಯೋಜನೆಯಾಗಬೇಕು ಎಂದು ಆಶಿಸಿದರು. ಈ ಸಂದರ್ಭದಲ್ಲಿ ಆಸ್ಪತ್ರೆಯ ಸಿಬ್ಬಂದಿಗಳಾದ ಬಸವರಾಜ ಹಾವೇರಿ, ವಿಜಯ ಮಾಂತೇಶ, ದಾವುದ ಮಕಾಂದಾರ, ಪಾವಡಶೆಟ್ಟಿ, ಬಸವರಾಜ ಬಡಿಗೇರ, ಎಂ.ಎಸ್. ಗೌಡರ, ಮಲ್ಲು ತಂಗಡಗಿ (ಎಫ್‌ಡಿಸಿ), ಶ್ರೀಕಾಂತ ಸಜ್ಜನ, ಶ್ರೀಮತಿ ಕಲ್ಯಾಣಿ ಕೊಣ್ಣೂರ, ಓಲೆಕಾರ್, ರಾಜಶ್ರೀ ಹೊಕ್ರಾಣಿ, ರೇಖಾ ಜಾಯಗೊಂಡ, ನಸ್ರೀನ ಕೆ., ಶಿಲ್ಪಾ, ಭಾರತಿ, ರೇಷ್ಮಾ, ಸಲೀಂ ನದಾಫ ಸೇರಿದಂತೆ ವಿವಿಧ ವಿಭಾಗಗಳ ಸಿಬ್ಬಂದಿ ಉಪಸ್ಥಿತರಿದ್ದರು.

## ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ (ರಿ)."ಸಂಘಕ್ಕೆ ನೂತನ ಅಧ್ಯಕ್ಷರಾಗಿ ಉದಯಕುಮಾರ ಪತ್ತಾರ ಮಸ್ಕಿ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಮಾಜ ಸೇವಕರು, ಹಿರಿಯ ಮುತ್ಸದ್ಧಿಗಳು, ಸಂಘಟನಾ ಚತುರರು, ವಿಶ್ವಕರ್ಮ ಸಮಾಜದ ಹಿರಿಯ ಮುಖಂಡರಾದ "ಶ್ರೀ ಉದಯಕುಮಾರ ಪತ್ತಾರ ಮಸ್ಕಿ" ಅವರನ್ನು ಜಿಲ್ಲಾ ವಿಶ್ವಕರ್ಮ ಸಮಾಜದ ಹಿರಿಯ, ಕಿರಿಯ ಮುಖಂಡರುಗಳು "ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ (ರಿ)."ಸಂಘಕ್ಕೆ ನೂತನ ಅಧ್ಯಕ್ಷರಾಗಿ ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆ ಮಾಡಿರುತ್ತಾರೆ.**



ಶ್ರೀ ಯುತ ಉದಯಕುಮಾರ ಪತ್ತಾರ ಮಸ್ಕಿ ಅವರಿಗೆ ತುಂಬು ಹೃದಯ ಪೂರ್ವಕ ಅಭಿನಂದನೆಗಳು ರಾಯಚೂರು ಜಿಲ್ಲೆಯಾದ್ಯಂತ ಇನ್ನಷ್ಟು ಸಂಘಟನೆಯನ್ನು ಬಲಪಡಿಸುವಂತಾಗಲಿ ಎಂದು ಆಶಿಸುತ್ತೇವೆ.

# ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ ಅಮರೇಶ ಯಾದವ್

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ. ಅದಕ್ಕಾಗಿ ಮಹಿಳೆಯರು ಹಾಲಿನ ಸಂಘಗಳನ್ನು ಸ್ಥಾಪಿಸಿಕೊಂಡು ಆರ್ಥಿಕ ಸ್ವಾವಲಂಬನೆ ಹೊಂದಬೇಕಾಗಿದೆ. ಸಬ್ಸಿಡಿ ದರದಲ್ಲಿ ದೊರೆಯುವ ಉತ್ತಮ ತಳಿಯ ರಾಸುಗಳನ್ನು ಖರೀದಿಸಿ ಅವುಗಳ ಆರೋಗ್ಯ ಮತ್ತು ಆಹಾರದ ಬಗ್ಗೆ ಕಾಳಜಿವಹಿಸುವಂತೆ ತಿಳಿಸಿ, ವೈಜ್ಞಾನಿಕ ಆಹಾರ ಪದ್ಧತಿ ಅನುಸರಿಸಿ ಸರಕಾರದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ ಅಧಿಕ ಹಾಲು ಉತ್ಪಾದನೆಯ ಗುರಿ ಹೊಂದುವಂತೆ ಮಸ್ಕಿ ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಅಮರೇಶ ಯಾದವ ತಿಳಿಸಿದರು.**

ಅವರು ಮಸ್ಕಿ ತಾಲೂಕು ಪಂಚಾಯತ್ ಕಛೇರಿ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು-ಬಳ್ಳಾರಿ-ಕೊಪ್ಪಳ-ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ರಾಯಚೂರು-ಕೊಪ್ಪಳ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಸ್ಕಿ ಶಾಖೆ, ಸಹಕಾರ ಇಲಾಖೆ, ತಾಲೂಕು ಪಂಚಾಯತ್ ಮಸ್ಕಿ ಹಾಗೂ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ



ಸಹಕಾರ ಸಂಘಗಳು ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಏರ್ಪಡಿಸಿದ ವಿಶೇಷ ಕಾರ್ಯಕ್ರಮ ಉದ್ಘಾಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ಶಶಿಧರ ಪಾಟೀಲ ಇವರ ಅನುಪಸ್ಥಿತಿಯಲ್ಲಿ ಕೆ.ಎಂ.ಎಫ್ ಹಾಲು ಒಕ್ಕೂಟದ ನಿರ್ದೇಶಕ ಅಮರಗುಂಡಪ್ಪ ವಹಿಸಿ ಸಹಕಾರ ಪಿತಾಮಹ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿ ತಾಲೂಕಿನ ಪ್ರತಿ ಗ್ರಾಮದಲ್ಲಿ ನೂತನ ಹಾಲಿನ ಸಂಘಗಳಿಂದ ಮುಂದಿನ ದಿನಗಳಲ್ಲಿ ಪ್ರತಿ ದಿನ 50 ಸಾವಿರ ಲೀಟರ್ ಹಾಲು ಉತ್ಪಾದನೆಯ ಗುರಿ ಹೊಂದಿರುವ ಬಗ್ಗೆ ತಿಳಿಸಿ, ಇದಕ್ಕೆ ಬೇಕಾದ ಪಶು ಆಹಾರವನ್ನು ಸಬ್ಸಿಡಿ ದರದಲ್ಲಿ ಕೆ.ಎಂ. ಎಫ್. ಒಕ್ಕೂಟದಿಂದ ಒದಗಿಸುವುದಾಗಿ ತಿಳಿಸಿದರು.



ಮಸ್ಕಿ ತಾಲೂಕು ಪಂಚಾಯತ್ ಸಹಾಯಕ ನಇರ್ದೇಶಕ ಸೋಮನಗೌಡ ಪಾಟೀಲ ಮಾತನಾಡಿ ತಾಲೂಕು ಪಂಚಾಯತಿಯಿಂದ ಸಹಕಾರ ಸಂಘಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ, ಕೇವಲ ಸಬ್ಸಿಡಿ ಪಡೆಯುವ ಉದ್ದೇಶದಿಂದ ಸಂಘಗಳನ್ನು ರಚಿಸಿಕೊಳ್ಳಬೇಡಿ, ತಮ್ಮ ಭವಿಷ್ಯದ ಆರ್ಥಿಕತೆಯ ಅನುಕೂಲಕ್ಕಾಗಿ ಸ್ಥಾಪಿಸಿಕೊಳ್ಳುವಂತೆ ಸಲಹೆ ನೀಡಿದರು. ಡಾ॥ ಮಲ್ಲಿಕಾರ್ಜುನ ಹೆಚ್ಚ ಕಮತಗಿ ಸಹಕಾರ ಇಲಾಖೆ (ಎ.ಆರ್.ಸಿ.ಎಸ್. ಕಛೇರಿ) ಸಿಂಧನೂರು ಇವರು ಸಹಕಾರ ಕ್ಷೇತ್ರ ಬೆಳೆದು ಬಂದ ದಾರಿ, ಕೃಷಿಯಲ್ಲಿ ಉಪಕಸಬುಗಳ ಅಳವಡಿಕೆ, ಉದ್ಯೋಗ ಸೃಷ್ಠಿಸಿಕೊಂಡು ಲಾಭದ ಜೀವನ ನಡೆಸುವಂತೆ ತಿಳಿಸಿ, ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳ ಹಕ್ಕು, ಕರ್ತವ್ಯ ಹಾಗೂ ಜವಾಬ್ದಾರಿಗಳ ಕುರಿತು ಉಪನ್ಯಾಸ ನೀಡಿದರು.

ಡಾ॥ ದೇವಣ್ಣ ಪಶು ವೈದ್ಯರು ಕೆ.ಎಂ.ಎಫ್. ಹಾಲು ಒಕ್ಕೂಟ ಬಳ್ಳಾರಿ ಇವರು ಪಶು ಆಹಾರ, ಗುಣಮಟ್ಟದ ಮತ್ತು ಅಧಿಕ ಹಾಲಿನ ಉತ್ಪಾದನೆಗೆ ಉತ್ತೇಜನ, ರಾಸುಗಳ ನಿರ್ವಹಣೆ, ಕರುಗಳ ಲಾಲನೆ-ಪಾಲನೆ ಹಾಗೂ ಹೈನುಗಾರಿಕೆ ಮಹತ್ವ ಕುರಿತು ತಮ್ಮ ವಿಶೇಷ ಉಪನ್ಯಾಸ ತಿಳಿಸಿದರು. ರೇಖಾ ಕೃಷಿಸಖಿ ಗ್ರಾಮ ಪಂಚಾಯತಿ ತಲೇಖಾನ ಇವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಜಿಲ್ಲಾ ಸಹಕಾರ ಒಕ್ಕೂಟದ ಜಿಲ್ಲಾ ಸಹಕಾರ ಶಿಕ್ಷಕರಾದ ಕು॥ ಅಶ್ವಿನಿ ಕೆ. ಸ್ವಾಗತಿಸಿದರು. ಮುಖ್ಯಕಾರ್ಯನಿರ್ವಹಣಾಧಿಕಾರಿ ಗಾಯತ್ರಿ ವೈ. ಮಾತನಾಡಿದರು. ಜಿಲ್ಲಾ ಸಹಕಾರ ಶಿಕ್ಷಕರಾದ ನಿರೂಪಿಸಿದರೆ ಒಕ್ಕೂಟದ ವ್ಯವಸ್ಥಾಪಕ ಮಲ್ಲಿಕಾರ್ಜುನ ಎಂ. ಅಮ್ಮಿನಭಾವಿ ವಂದಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಮಸ್ಕಿ ತಾಲೂಕಿನ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಕೃಷಿ ಮಖಿ ಹಾಗೂ ಪಶು ಸಖಿಯರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಆಯ್ದ ಸಂಘಗಳಿಗೆ ನಾರಿ ಕ್ಲಿಪ್ ಯೋಜನೆಯಲ್ಲಿ ಸಮೀಕ್ಷೇದಾರರಿಗೆ ನಾರಿ ಕಿಟ್ (ಬ್ಯಾಗ್) ಮತ್ತು ನಾರಿ ಸಖಿಯರಿಗೆ ಸ್ಟೇಷನರಿ ಕಿಟ್‌ಗಳನ್ನು ವಿತರಿಸಲಾಯಿತು.